ವಿಜಯಪುರ | ಸಂಪುಟ 02 | ಸಂಚಿಕೆ 66 | ಪುಟ 4 | ₹ 3.00

https://udayarashminews.com

udayarashmi 7026028778

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com | RNI NO: KARKAN/2023/86203 | ಮಂಗಳವಾರ, ಏಪ್ರಿಲ್ 30, 2024

“ಕಳೆದ 10 ವರ್ಷಗಳಲ್ಲಿ ಪ್ರಧಾನಿ ಮೋದಿ ಬೆಲೆ ಏರಿಕೆ, ಉದ್ಯೋಗ ಕಡಿತ, ಜಿಎಸ್ಟಿ ಹೆಸರಿನಲ್ಲಿ ರೈತರು, ಜನಸಾಮಾನ್ಯ-ರಿಗೆ ಹೊರೆಯಾಗುವಂಥ ದೊಡ್ಡ ಕೊಡುಗೆಗಳನ್ನು ನೀಡಿದ್ದು, ಅದಕ್ಕೆ ತಕ್ಕ ಉತ್ತರ ನೀಡಲು ಕಾಂಗ್ರೆಸ್ ಅಭ್ಯರ್ಥಿಗಳನ್ನು ಗೆಲ್ಲಿಸಬೇಕು.”

– ಸಚಿವ ಎಂ. ಬಿ. ಪಾಟೀಲ

ಕೈಗಾರಿಕೆ, ಮೂಲಸೌಲಭ್ಯ ಸಚಿವರು




### ಬಾಗಲಕೋಟೆ ಪ್ರಚಾರಸಭೆಯಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಪ್ರಧಾನಿ ನರೇಂದ್ರ ಮೋದಿ ತೀವ್ರ ವಾಗ್ದಾಳಿ

# ಕಾಂಗ್ರೆಸ್ ಸರ್ಕಾರದಿಂದ ತುಷ್ಟೀಕರಣ ರಾಜಕಾರಣ :ಮೋದಿ

**ಉದಯರಶ್ಮಿ ನ್ಯೂಸ್**

ಬಾಗಲಕೋಟೆ: ಕರ್ನಾಟಕ ಸರ್ಕಾರವನ್ನು ವಸೂಲಿ ಗ್ಯಾಂಗ್ ಎಂದು ಪ್ರಧಾನಿ ನರೇಂದ್ರ ಮೋದಿ ಆರೋಪಿಸಿದ್ದಾರೆ.

ಸೋಮವಾರ ಬಾಗಲಕೋಟೆಯ ನವನಗರದ ತೋಟಗಾರಿಕೆ ವಿವಿ ಆವರಣದ ಬಳಿ ಬಿಜೆಪಿ ಆಯೋಜಿಸಿದ್ದ ಚುನಾವಣಾ ಪ್ರಚಾರಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿ ಇದೊಂದು ಲೂಟಿಕೋರ ಸರ್ಕಾರ ಎಂದು ಆರೋಪಿಸಿದರು.

ಕರ್ನಾಟಕ ಲೂಟಿ ಮಾಡುತ್ತಿರುವವ-ರಿಗೆ ಶಿಕ್ಷೆ ಆಗಬೇಕೋ ಬೇಡವೋ ಎಂದು ಪ್ರಶ್ನಿಸಿದ ಅವರು, ಅಂತರರಾಷ್ಟ್ರೀಯ ಮಟ್ಟದಲ್ಲಿ ಹೆಸರುವಾಸಿಯಾಗಿರುವ ಬೆಂಗಳೂರಿನಲ್ಲಿ ಟ್ಯಾಂಕರ್ ಮಾಫಿಯಾ ನಡೆಯುತ್ತಿದೆ ಎಂದು ದೂರಿದ ಅವರು, ಅದರಲ್ಲಿಯೂ ಕಮೀಷನ್ ವ್ಯವಹಾರ ನಡೆಯುತ್ತಿದೆ. ಅಷ್ಟಾದರೂ ಅವರಿಗೆ ತೃಪ್ತಿ ಇಲ್ಲ ಎಂದರು.

ಹುಬ್ಬಳ್ಳಿಯಲ್ಲಿ ನೇಹಾ ಹತ್ಯೆ ಪ್ರಕರಣ ಪ್ರಸ್ತಾಪಿಸಿದ ಅವರು, ರಾಜ್ಯ ಕಾಂಗ್ರೆಸ್ ಸರ್ಕಾರ ವೋಟ್ ಬ್ಯಾಂಕ ರಾಜಕಾರಣ ಮಾಡುತ್ತಿದೆ. ಯುವತಿಯ ವ್ಯಕ್ತಿತ್ವದ ಮೇಲೆ ಕಾಂಗ್ರೆಸಿಗರು ದಾಳಿ ಮಾಡಿದ್ದರು. ಹನಮಾನ್ ಚಾಲೀಸ್ ಹೇಳುವವರ ಮೇಲೆ ದಾಳಿ ಆಗುತ್ತೆ. ಅದರಲ್ಲಿಯೂ ಕಾಂಗ್ರೆಸ್ ಸರ್ಕಾರ ತುಷ್ಟೀಕರಣ ರಾಜಕಾರಣ ಮಾಡುತ್ತಿದೆ ಎಂದು ಆಪಾದಿಸಿದರು.




ಕಾಂಗ್ರೆಸ್ ವೋಟ್ ಬ್ಯಾಂಕ್ ರಾಜಕಾರಣದಿಂದ ಎಸ್‌ಸಿ, ಎಸ್‌ಟಿ ಸಮುದಾಯಗಳಿಗೆ ಸುರಕ್ಷಿತ ಇಲ್ಲದಂತಾಗಿದೆ. ಎಸ್‌ಸಿ, ಎಸ್‌ಟಿ ಮೀಸಲಾತಿ ಬದಲಿಸುವ ಹುನ್ನಾರ ನಡೆಸಿದ್ದಾರೆ. ರಾಜ್ಯ ಸರ್ಕಾರದಿಂದ ಓಬಿಸಿಗೆ ಸಿಗಬೇಕಾದ ಮೀಸಲಾತಿಯನ್ನು ಮುಸ್ಲಿಂಗೆ ನೀಡಿದೆ. ಅಂಬೇಡ್ಕರ ಸಂವಿಧಾನದಲ್ಲಿ ಎಸ್‌ಸಿ, ಎಸ್‌ಟಿಗೆ ನೀಡಿದ ಅಧಿಕಾರವನ್ನು ವೋಟ್ ಬ್ಯಾಂಕ ರಾಜಕಾರಣಕ್ಕಾಗಿ ಲೂಟಿ ಮಾಡುತ್ತಿದೆ. ಎಸ್‌ಸಿ, ಎಸ್‌ಟಿ, ಓಬಿಸಿ ಸಮುದಾಯಗಳ ಮೀಸಲಾತಿಯನ್ನು ಲೂಟಿ ಮಾಡಿ ಅಲ್ಪಸಂಖ್ಯಾತರಿಗೆ ಕೊಡುವುದು ಕಾಂಗ್ರೆಸ್ ಕೆಲಸವಾಗಿದೆ. ಮೋದಿ ಇರುವವರೆಗೂ ಕಾಂಗ್ರೆಸ್‌ನ ಈ ಕಾರ್ಯ ನಡೆಯದು. ಇದಕ್ಕಾಗಿ ಮೋದಿ ಎಲ್ಲಿಗೂ ಹೋಗಲು ಸಿದ್ಧ ಎಂದರು.

ಜಗತ್ತಿನ ಸಾಮಾಜಿಕ ಜಾಲತಾಣದಲ್ಲಿ ಅತೀ ಹೆಚ್ಚು ಫಾಲೋವರ್ಸ್ ಇರೋದು ಮೋದಿ ಅವರಿಗೆ. ಈ ಶಕ್ತಿಯನ್ನು ನಾನು ದೇಶ ಕಟ್ಟಲು ಬೆಳೆಸುತ್ತೇನೆ. ಆದರೆ ಕಾಂಗ್ರೆಸ್ ಫೇಕ್ ವಿಡಿಯೋ ಹಾಕಲು ಬಳಿಸಿಕೊಳ್ಳುತ್ತದೆ. ನಿಮಗೆ ಒಂದೊಮ್ಮೆ ಫೇಕ್ ವಿಡಿಯೋ ಬಂದರೆ ಪೊಲೀಸ-ರಿಗೆ ದೂರು ನೀಡಿ ಎಂದು ಅವರು ಹೇಳಿದರು.

ಬಾಗಲಕೋಟೆ ಮತ್ತು ವಿಜಯಪುರ ಲೋಕಸಭಾ ಕ್ಷೇತ್ರಗಳ ಅಭ್ಯರ್ಥಿಗಳು ತಮ್ಮ ಕ್ಷೇತ್ರದ ಅಭಿವೃದ್ಧಿಗಾಗಿ ಸಾಕಷ್ಟು ಕೆಲಸ ಮಾಡಿದ್ದಾರೆ. ರೈಲ್ವೆ ಹಾಗೂ ರಾಷ್ಟ್ರೀಯ ಹೆದ್ದಾರಿ ಯೋಜನೆ ಅನುಷ್ಠಾನದಲ್ಲಿ ಉತ್ತಮ ಕೆಲಸ ಮಾಡಿದ್ದಾರೆ. ಇದರಿಂದ ಇಲ್ಲಿನ ಐಹೊಳಿ, ಪಟ್ಟದಕಲ್ಲು, ಬದಾಮಿ ಪ್ರವಾಸಿ ತಾಣಗಳ ಪ್ರಗತಿ ಸಾಧ್ಯವಾಗಿದೆ. ಅದಕ್ಕಾಗಿ ಪಿ.ಸಿ.ಗದ್ದಿಗೌಡರ್ ಹಾಗೂ ರಮೇಶ ಜಿಗಜಿಣಗಿ ಅವರನ್ನು ಲಕ್ಷಾಂತರ ಮತಗಳ ಅಂತರದಿಂದ ಗೆಲ್ಲಿಸಬೇಕು ಎಂದು ಅವರು ಮನವಿ ಮಾಡಿದರು.

ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ, ಸಂಸದರಾದ ಪಿ.ಸಿ.ಗದ್ದಿಗೌಡರ, ರಮೇಶ ಜಿಗಜಿಣಗಿ, ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ, ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ, ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ, ಮಾಜಿ ಸಚಿವ ಸಿ.ಸಿ.ಪಾಟೀಲ, ಗೋವಿಂದ ಕಾರಜೋಳ, ಸಂಗಣ್ಣ ಬೆಳ್ಳುಬ್ಬಿ, ಮುರುಗೇಶ ನಿರಾಣಿ, ಶಾಸಕರಾದ ಸಿದ್ದು ಸವದಿ, ಜಗದೀಶ ಗುಡಗುಂಟಿ, ಮಾಜಿ ಶಾಸಕ ವೀರಣ್ಣ ಚರಂತಿಮಠ, ರಾಜಶೇಖರ ಶೀಲವಂತ, ದೊಡ್ಡನಗೌಡ ಪಾಟೀಲ, ಬಿಜೆಪಿ ಜಿಲ್ಲಾಧ್ಯಕ್ಷರಾದ ಶಾಂತಗೌಡ ಪಾಟೀಲ, ಆರ್.ಎಸ್.ಪಾಟೀಲ ಕುಚಬಾಳ, ಜಗದೀಶ ಹಿರೇಮನಿ ಸೇರಿದಂತೆ ಅನೇಕರು ವೇದಿಕೆ ಮೇಲೆ ಇದ್ದರು.



### ರಾಜ ನುಡಿ

ಜೀವನದಲ್ಲಿ ದುಬಾರಿ ಪಾಠಗಳನ್ನು ಅಗ್ಗದ ಜನ-ರಿಂದಲೇ ಕಲಿಯುತ್ತೇವೆ. ಅಗ್ಗದ ಯೋಚನೆ ಹೊಂದಿದ ಜನರ ಮಾತಿಗೆ ನೋವು ಮಾಡಿಕೊಳ್ಳುವ ಬದಲು ನಕ್ಕು ಸುಮ್ಮನಾಗಬೇಕು. ನೆಮ್ಮದಿಯ ಬದುಕಿಗಿದೊಂದು ರಹದಾರಿ..

-ಡಾ. ರಾಜಶೇಖರ ನಾಗೂರ

### ವಚನ ಚಿಂತನ 368

*ಅನುವನರಿಯದೆ, ಆದಿಯ ವಿಚಾರಿಸದೆ,*
*ಅನಾದಿಯಲ್ಲಿ ತಾನೆರೆಂಬುದ ನೋಡದೆ*
*ಸ್ತೋತ್ರವ ಮಾಡಿ ಫಲವೇನು ?*
*‘ನಿಶ್ಶಬ್ದಂ ಬ್ರಹ್ಮ ಉಚ್ಯತೇ’ ಎಂಬ ಘನವು ಹೊಗಳತೆಗೆ ಸಿಕ್ಕುವುದೆ ಎಲೆ ಮರುಳುಗಳಿರಾ ?*
*ಅನಾದಿಯಲ್ಲಿ ಬಸವಣ್ಣನು ಏಳುನೂರೆಪ್ಪತ್ತು ಅಮರಗಣಂಗಳು ಸಹಿತ ಮರ್ತ್ಯಕ್ಕೆ ಬಂದನೊಂದು ಕಾರಣದಲ್ಲಿ.*
*ಬಂದ ಮಣಿಹ ಪೂರೈಸಿತ್ತು ಸಂದ ಪುರಾತರೆಲ್ಲರೂ ಕೇಳಿ,*
*ಇಂದು ನೀವೆಲ್ಲರು ನಿಮ್ಮ ನೀವು ತಿಳಿದು ನೋಡಿ*
*ನಿಜವನೈದುವುದು. ಇನ್ನು ನಮ್ಮ ಗುಹೇಶ್ವರಲಿಂಗಕ್ಕೆ ಸುರಾಳದ ಸುಳುಹಿಲ್ಲ.*

ಅಲ್ಲಮಪ್ರಭುಗಳು ಈ ವಚನದ ಮೂಲಕ ಬಸವಾದಿ ಶರಣರು ಕೈಗೊಂಡ ಕಾರ್ಯಗಳ ಸಮಗ್ರ ಉದ್ದೇಶವನ್ನು ಪ್ರಸ್ತಾಪಿಸುತ್ತ, ನಾವುಗಳೆಲ್ಲ ನಮ್ಮ ಹುಟ್ಟಿನ ಮೂಲವನ್ನು ಅರಿತುಕೊಂಡು ಇಲ್ಲಿ ಕೈಗೊಳ್ಳಬೇಕಾದ ಕಾರ್ಯವನ್ನು ನೆನಪಿಸಿದ್ದಾರೆ. ದೇವರ ಬಗ್ಗೆ ಮೌಢ್ಯತೆಯ ನಿಲುವು ತಾಳದೆ ವೈಚಾರಿಕತೆಯಿಂದ ವಿಚಾರಿಸಲು ತಿಳಿಸಿದ್ದಾರೆ. ವಚನದ ಪ್ರಾರಂಭದ ಸಾಲಿನಲ್ಲಿ “ಅನುವನರಿಯದೆ, ಆದಿಯ ವಿಚಾರಿಸದೆ, ಅನಾದಿಯಲ್ಲಿ ತಾನೆರೆಂಬುದ ನೋಡದೆ

ಸ್ತೋತ್ರವ ಮಾಡಿ ಫಲವೇನು ?” ತಾನಾರೆಂದು ಈ ಮುಂಚೆ ತಾನು ಏನಾಗಿದ್ದೆ ಎಂದು ಅರಿತುಕೊಳ್ಳದೆ,ದೇವರಿಗಿಂತ ತನ್ನ ಮೂಲ ಭಿನ್ನವೆಂದು ಭಾವಿಸುತ್ತ ದೇವರು ತನ್ನಿಂದ ಬೇರೆ ಎಂದು ಭಾವಿಸಿ ಸ್ತೋತ್ರವ ಮಾಡಿದರೆ ಫಲದೊರೆಯದು ಎಂದಿದ್ದಾರೆ.ಬ್ರಹ್ಮ (ಸೃಷ್ಟಿಗೆ ಕಾರಣವಾದ ಶಕ್ತಿ)ವೆಂಬುದು ಶಬ್ದಕ್ಕೆ ನಿಲುಕದ ನಿಶ್ಯಬ್ದ ಅದನ್ನು ಸ್ತೋತ್ರ, ಭಜನೆ,ಗಾಯನದ ಮೂಲಕ ಹೊಗಳುವುದ ರಿಂದ ಅರಿಯಲು ಸಾಧ್ಯವಿಲ್ಲ. ಅದನ್ನು ಅರಿತುಕೊಳ್ಳಲು ಸಹಾಯ ಮಾಡುವುದಕ್ಕೋಸ್ಕರವಾಗಿ ಬಸವಣ್ಣನವರು ಮತ್ತು 770 ಶರಣರು ಭೂಮಿಗೆ ಅವತರಿಸಿ ತಮ್ಮ ಕಾರ್ಯವನ್ನು ಪೂರೈಸಿದ್ದಾರೆ ಎಂದಿದ್ದಾರೆ.(ಅನಾದಿಯಲ್ಲಿ ಬಸವಣ್ಣನು ಏಳುನೂ ರೆಪ್ಪತ್ತು ಅಮರಗಣಂಗಳು ಸಹಿತ ಮರ್ತ್ಯಕ್ಕೆ ಬಂದನೊಂದು ಕಾರಣದಲ್ಲಿ. ಬಂದ ಮಣಿಹ ಪೂರೈಸಿತ್ತು ಸಂದ ಪುರಾತರೆಲ್ಲರೂ ಕೇಳಿ,) ಕುರುಹುವಿಲ್ಲದ ಲಿಂಗವರಿಯಲು ಸೂಚಿಸಿದ್ದಾರೆ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

# ಬಿಜೆಪಿ ಅಭ್ಯರ್ಥಿ ಊರಲ್ಲೇ ಪ್ರಚಾರದ ವೇಗ ಹೆಚ್ಚಿಸಿಕೊಂಡ ಆಲಗೂರ

**ಉದಯರಶ್ಮಿ ನ್ಯೂಸ್**

ವಿಜಯಪುರ: ಇಂಡಿ ಕ್ಷೇತ್ರದ ಅಥರ್ಗಾದಲ್ಲಿ ಭಾನುವಾರ ರಾತ್ರಿ ನಡೆದ ಪ್ರಚಾರ ಸಭೆ ಕಾಂಗ್ರೆಸ್‌ಗೆ ಮತ್ತಷ್ಟು ಆತ್ಮವಿಶ್ವಾಸ ತುಂಬಿತು. ಜತೆಗೆ ಬಿಜೆಪಿ ಅಭ್ಯರ್ಥಿಯ ಈ ಊರಲ್ಲೇ ಸರಾಗವಾಗಿ ಸಾಗಿರುವ ಕಾಂಗ್ರೆಸ್‌ನ ಪ್ರಚಾರ ರಥದ ವೇಗ ಇನ್ನೂ ಹೆಚ್ಚಿತು.

ಸಭೆಯಲ್ಲಿ ಮಾತನಾಡಿದ ಶಾಸಕ ಯಶವಂತರಾಯಗೌಡ ಪಾಟೀಲ, ನೀವು ನಿಮ್ಮೂರವರಿಗೆ ಬಹಳ ಅವಕಾಶ, ಅಧಿಕಾರ ನೀಡಿದ್ದೀರಿ. ಆದರೆ ನಿಮಗೆ ಅವರು ವಾಪಸು ಏನು ಕೊಟ್ಟರು? ಸುಮಾರು ಐವತ್ತು ವರ್ಷಗಳಿಂದ ಅಧಿಕಾರ ಅನುಭವಿಸಿದರೂ ನಿಮ್ಮ ಏಳ್ಗೆಗಾಗಿ, ಕ್ಷೇತ್ರದ ಅಭಿವೃದ್ಧಿಗಾಗಿ ಜಿಗಜಿಣಗಿ ಅವರು ಶ್ರಮಿಸಲಿಲ್ಲ. ನಾವು ತಾಲೂಕಿನ ಕೆರೆಗಳನ್ನು ತುಂಬಿಸಿದ್ದೇವೆ, ನಿಂಬೆ ಅಭಿವೃದ್ಧಿ ನಿಗಮ ಮಾಡಿದ್ದೇವೆ. ರಸ್ತೆ, ಇಂಡಿ ಪಟ್ಟಣಕ್ಕೆ ನಿರಂತರ ನೀರು ಕೊಟ್ಟಿದ್ದೇವೆ. ಮುಂದೂ ಅನೇಕ ಕೆಲಸಗಳು, ಶಾಶ್ವತ ನೀರಾವರಿ ಯೋಜನೆ ಆಗಲಿದೆ ಎಂದು ಹೇಳಿದರು.




ಪ್ರಾಧ್ಯಾಪಕರಾಗಿ ನಿಮ್ಮೂರಲ್ಲೇ ಸೇವೆ ಮಾಡಿರುವ ಆಲಗೂರರು ವಿದ್ಯಾವಂತ, ಪ್ರಬುದ್ಧರಾಗಿದ್ದಾರೆ. ಅವರಿಗೆ ಅವಕಾಶ ಸಿಕ್ಕರೆ ಸಂಸತ್‌ನಲ್ಲಿ ನಿಮ್ಮ ದನಿಯಾಗಲಿದ್ದಾರೆ. ಅವರೊಬ್ಬ ಉತ್ತಮ ಸಂಸದೀಯ ಪಟುವಾಗಲಿದ್ದಾರೆ. ರಾಜ್ಯ ಹಾಗೂ ಕೇಂದ್ರದಲ್ಲೂ ನಮ್ಮದೇ ಸರಕಾರವಿದ್ದರೆ ಸಮಗ್ರ ಬದಲಾವಣೆ ಸಾಧ್ಯ ಎಂದು ಹೇಳಿದರು.

ಅಭ್ಯರ್ಥಿ ರಾಜು ಆಲಗೂರರು ಮಾತನಾಡಿ, ‘ನಿಮ್ಮ ಅಭಿಮಾನ, ಪ್ರೀತಿ ಕಂಡು ಮೂಕನಾಗಿರುವೆ. ನನಗೆ ಮತ ನೀಡಿದರೆ ಇಷ್ಟು ವರ್ಷಗಳ ಕಾಲ ನೀವು ಅಭಿವೃದ್ಧಿಯಿಂದ ವಂಚಿತರಾಗಿದ್ದನ್ನು ಮರೆಮಾಚಿ, ಈ ವಿಜಯಪುರ ಲೋಕಸಭೆ ಕ್ಷೇತ್ರದ ಸರ್ವತೋಮುಖ ಬೆಳವಣಿಗೆಗೆ ಹಗಲು-ರಾತ್ರಿ ಶ್ರಮಿಸುವೆ. ನಿಮ್ಮ ಸೇವಕನಾಗಿ ದುಡಿಯುವೆ’ ಎಂದು ಹೇಳಿದರು.

ಮುಖಂಡರಾದ ಜಟ್ಟೆಪ್ಪ ರವಳಿ, ಗುರಣ್ಣಗೌಡ ಪಾಟೀಲ, ಎಂ.ಆರ್. ಪಾಟೀಲ, ಎಸ್.ಅರ್.ಸಿಂದಗಿ, ಎಂ.ಆರ್.ಪತಂಗಿ, ರೇವಣಸಿದ್ಧ ಅಂಕಲಗಿ, ಇಲಿಯಾಸ್ ಬೋರಾಮಣಿ, ಜಾವೇದ್ ಮೋಮಿನ್ ಸೇರಿದಂತೆ ಅನೇಕರಿದ್ದರು.

ಇದೇ ಸಂದರ್ಭದಲ್ಲಿ ಜೆಡಿಎಸ್ ಪಕ್ಷ ತೊರೆದು ಅನೇಕರು ಕಾಂಗ್ರೆಸ್ ಪಕ್ಷವನ್ನು ಸೇರಿದರು.

# 30ಕೆಜಿ ಅಫೀಮ್-10ಕೆಜಿ ಗಾಂಜಾ ಸಾಗಾಟ :ಆರೋಪಿ ಬಂಧನ



**ಉದಯರಶ್ಮಿ ನ್ಯೂಸ್**

ವಿಜಯಪುರ: ಅಕ್ರಮವಾಗಿ ಲಾರಿಯಲ್ಲಿ ಅಫೀಮ್ ಹಾಗೂ ಗಾಂಜಾ ಸಾಗಾಟ ವೇಳೆ ಪೊಲೀಸರು ದಾಳಿಗೈದು ಲಾರಿ ಸಮೇತ ಆರೋಪಿಯನ್ನು ಬಂಧಿಸಿರುವ ಘಟನೆ ವಿಜಯಪುರ ಜಿಲ್ಲೆಯ ಚಡಚಣ ತಾಲ್ಲೂಕಿನ ಶಿರಾಡೋಣ ಗ್ರಾಮದಲ್ಲಿ ನಡೆದಿದೆ.

ದೆಹಲಿಯ ಮೂಲದ ಬಶೀರ್ ಅಹ್ಮದ್ ಬಂಧಿತ ಆರೋಪಿ. ಇನ್ನು ಬಂಧಿತ ಆರೋಪಿಯಿಂದ 10 ಕೆಜಿ ಗಾಂಜಾ, 30 ಕೆಜಿ ಅಫೀಮ್,ಒಂದು ಲಾರಿ ವಶಕ್ಕೆ ಪಡೆದುಕೊಂಡಿದ್ದಾರೆ. ವಿಜಯಪುರ ಅಬಕಾರಿ ಪೊಲೀಸ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಲಚ್ಯಾಣ: ರಥದ ಚಕ್ರಕ್ಕೆ ಸಿಲುಕಿದ ಮೂವರ ಸಾವು!

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲೆಯ ಇಂಡಿ, ತಾಲ್ಲೂಕಿನ ಲಚ್ಯಾಣ ಗ್ರಾಮದಲ್ಲಿ ಭಾನುವಾರ ಸಂಜೆ ಸಿದ್ದಲಿಂಗೇಶ್ವರ ಜಾತ್ರ ಮಹೋತ್ಸವದ ಅಂಗವಾಗಿ ನಡೆದ ಶಂಕರಲಿಂಗೇಶ್ವರ ರಥೋತ್ಸವದ ವೇಳೆ ರಥದ ಚಕ್ರಕ್ಕೆ ಸಿಲುಕಿ ಮೂವರು ಸಾವನ್ನಪ್ಪಿದ ದಾರುಣ ಘಟನೆ ನಡೆದಿದೆ.

ಲಚ್ಯಾಣ ಗ್ರಾಮದ ಸಾಬು ಊರ್ಫ ಸೋಬರಾವ ಮಹಾದೇವ ಶಿಂಧೆ (50), ಅಭಿಷೇಕ ಧನರಾಜ ಮುಜಗೊಂಡ (15) ಸ್ಥಳದಲ್ಲಿಯೇ ಮೃತಪಟ್ಟಿದ್ದು, ಗಂಭೀರವಾಗಿ ಗಾಯಗೊಂಡಿದ್ದ ನಾಗೇಂದ್ ಶಿವಾಜಿ ಕಟಕದೊಂಡ ( 50 ) ಅವರನ್ನು ವಿಜಯಪುರದ ಬಿಎಲ್‌ಡಿ ಆಸ್ಪತ್ರೆಗೆ ದಾಖಲಿಸಲಾಗಿ-ತ್ತು. ಚಿಕಿತ್ಸೆ ಫಲಕಾರಿಯಾಗದೆ ಅವರು ಸೋಮವಾರ ಬೆಳಿಗ್ಗೆ ಅಸುನೀಗಿದ್ದಾರೆ.




ತೇರು ಎಳೆಯುವಾಗ ಹಗ್ಗ ಹ-ರಿದಿದ್ದು ತೇರಿನ ರಭಸಕ್ಕೆ ಮೂವರು ತೇರಿನ ಗಾಲಿಯ ಕೆಳಗೆ ಸಿಲುಕಿ ಈ ದುರ್ಘಟನೆ ಸಂಭವಿಸಿದೆ.

ಇಂಡಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಪಂಚ ಗ್ಯಾರಂಟಿಗಳ ಯಶಸ್ಸು ಕಾಂಗ್ರೆಸ್ ಗೆಲುವಿನ ಶ್ರೀರಕ್ಷೆ :ಸವದಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಇಲ್ಲಿಯ ಕಾಂಗ್ರೆಸ್ ಅಭ್ಯರ್ಥಿ ಪ್ರೊ.ಆಲಗೂರ ಗೆಲುವು ಸೂರ್ಯ ಚಂದ್ರ ಉದಯಿಸುವಷ್ಟೇ ಸತ್ಯ ಎಂದು ಮಾಜಿ ಉಪಮುಖ್ಯಮಂತ್ರಿ ಲಕ್ಷ್ಮಣ ಸವದಿ ಭವಿಷ್ಯ ನುಡಿದರು.

ವಿಜಯಪುರ ಜಿಲ್ಲಾ ಕಾಂಗ್ರೆಸ್ ಕಾರ್ಯಾಲಯದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪಂಚ ಗ್ಯಾರಂಟಿಗಳ ಯಶಸ್ಸು ಲೋಕಸಭೆ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವಿನ ಶ್ರೀ ರಕ್ಷೆಯಾಗಲಿವೆ ಎಂದರು.

ಕಾಂಗ್ರೆಸ್ ಅಧಿಕಾರಕ್ಕೆ ಬಂದ ಮೇಲೆ ನುಡಿದಂತೆ ನಡೆದಿದೆ, ಈ ಹಿನ್ನೆಲೆಯಲ್ಲಿ ಇಡೀ ರಾಜ್ಯದಲ್ಲಿ ಕನಿಷ್ಠ 20 ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲುವಿನ ದೊಡ್ಡ ಸಂಕಲ್ಪ ಮಾಡಿದ್ದು, ಜನತೆ ಆಶೀರ್ವಾದ ದೊರಕುವುದು ಶತಸಿದ್ಧ ಎಂದರು.

ವಿಜಯಪುರ ಜಿಲ್ಲೆಯನ್ನು ಮೂರು ಬಾರಿ ಸಂಸತ್ ನಲ್ಲಿ ಪ್ರತಿನಿಧಿಸಿದ ರಮೇಶ ಜಿಗಜಿಣಗಿ ಅವರ ವಿರುದ್ಧ ಆಡಳಿತ ಅಲೆ ಇದೆ, ಅವರು ಗ್ರಾಮೀಣ ಭಾಗಕ್ಕೆ ಸಂಚರಿಸಿಲ್ಲ, ಜನರ ಸಮಸ್ಯೆಗೆ ಸ್ಪಂದಿಸಿಲ್ಲ, ಹೀಗಾಗಿ ವಿಜಯಪುರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಗೆಲುವು ಖಾತ್ರಿ ಎಂದರು. ಅಷ್ಟೇ ಅಲ್ಲ 1 ಲಕ್ಷ ಮತಗಳ ಅಂತರದಿಂದ ಪ್ರೊ.ರಾಜು ಆಲಗೂರ ಗೆಲುವು ಸಾಧಿಸುವುದು ನಿಶ್ಚಿತ ಎಂದರು.

ನದಿಗಳ ಜೋಡಣೆ ದಿ.ಅಟಲ್ ಬಿಹಾರಿ ವಾಜಪೇಯಿ ಅವರ ದಿವ್ಯ ಕನಸಾಗಿತ್ತು, ಈ ಕನಸನ್ನೇ ತನ್ನ ಅಸ್ತ್ರವಾಗಿ ಬಳಸಿದ ಬಿಜೆಪಿ ಈ ಹಿಂದಿನ ಚುನಾವಣೆಯಲ್ಲಿ ಈ ವಿಷಯವನ್ನು ಪ್ರಬಲವಾಗಿ ಪ್ರತಿಪಾದಿಸಿತು, ಜೊತೆಗೆ ಗುಜರಾತ್ ಮಾಡೆಲ್, ನಮೋ ಬ್ರಿಗೇಡ್ ಮೂಲಕ ತೃತೀಯ ವಲಯದ ಪ್ರಚಾರ, ಸ್ವಿಸ್ ಬ್ಯಾಂಕ್ ಕಪ್ಪು ಹಣ ವಾಪಾಸ್ಸು ತರುವ ಪ್ರಚಾರ, ಈ ಹಣ ತಂದರೆ ಬಂಗಾರದ ರಸ್ತೆಯಾಗಿ ಪರಿವರ್ತಿಸುವ ಸುಳ್ಳು ಭರವಸೆ, ಮೂರು ಕೋಟಿ ಉದ್ಯೋಗ ಸೃಜನೆ, ಬೆಲೆ ಏರಿಕೆ ನಿಯಂತ್ರಣ, ರೈತರ ಆದಾಯ ದ್ವಿಗುಣದ ಆಶ್ವಾಸನೆ ನೀಡಿ ಅಧಿಕಾರಕ್ಕೆ ಬಂದಿತು. ಆದರೆ ಇದನ್ನು ಯಾವುದೇ ರೀತಿಯಲ್ಲೂ ಈಡೇರಿಸದ ಬಿಜೆಪಿ ನೈಜ ಬಣ್ಣ ಬಯಲಾಗಿದೆ, ಬಿಜೆಪಿಯ ಬಗ್ಗೆ ಜನತೆಗೆ ಭ್ರಮನಿರಸನವಾಗಿದೆ, ಆಡಳಿತ ವಿರೋಧಿ ಅಲೆ ಪ್ರಬಲವಾಗಿ ಬೀಸುತ್ತಿದೆ ಎಂದರು.



ರಾಜ್ಯಕ್ಕೆ ಬರಬೇಕಾದ ಬರ ಪರಿಹಾರ, ಜಿಎಸ್.ಟಿ ಪರಿಹಾರ ಹಣ, ಮಹದಾಯಿ ಯೋಜನೆ ಬಗ್ಗೆ ಕರ್ನಾಟಕದಿಂದ ಆಯ್ಕೆಯಾದ ಬಿಜೆಪಿ ಸಂಸದರು ಒಂದೇ ಒಂದು ಬಾರಿ ಮಾತನಾಡಿಲ್ಲ ಎಂಬುದು ನೋವಿನ ಸಂಗತಿ ಎಂದರು.

ಮಹಾದಾಯಿ ಯೋಜನೆಗಾಗಿ ಹಸಿರು ಶಾಲು ಹಾಕಿ ಹೋರಾಟ ಮಾಡಿದ ಬಸವರಾಜ ಬೊಮ್ಮಾಯಿ ಅವರೇ ಮುಖ್ಯಮಂತ್ರಿಯಾದರೂ ಸಹ ಈ ಯೋಜನೆ ಈಡೇರಿಸಲಿಲ್ಲ, ಇದು ಒಂದು ರೀತಿ ತಲೆ ತಗ್ಗಿಸುವ ಸನ್ನಿವೇಶ, ಹೀಗಾಗಿ ಬಿಜೆಪಿ ವರ್ತನೆ ಗಮನಿಸಿರುವ ಜನತೆ ಅದಕ್ಕೆ ತಕ್ಕ ಪಾಠ ಕಲಿಸಲಿದ್ದಾರೆ ಎಂದರು.

ವಿಜಯಪುರ ಮೀಸಲು ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಪ್ರೊ.ರಾಜು ಆಲಗೂರ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಲೋಣಿ, ಮುಖಂಡರಾದ ಅಬ್ದುಲ್ ಹಮೀದ್ ಮುಶ್ರೀಫ್, ವೈಜನಾಥ ಕರ್ಪೂರಮಠ, ಚಾಂದಸಾಬ ಗಡಗಲಾವ, ಸುರೇಶ ಗೊಣಸಗಿ, ಮಹಾದೇವಿ ಗೋಕಾಕ, ವಸಂತ ಹೊನಮೋಡೆ ಮೊದಲಾದವರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ಸಂಗನಗೌಡ ಗೆ ಅತ್ಯುತ್ತಮ ಪಶುವೈದ್ಯ ಪ್ರಶಸ್ತಿ

**ಉದಯರಶ್ಮಿ ನ್ಯೂಸ್**



ಢವಳಗಿ: ಕರ್ನಾಟಕ ವೆಟರ್ನರಿ ಕೌನ್ಸಿಲ್ ಬೆಂಗಳೂರು ಮತ್ತು ಕರ್ನಾಟಕ ಕೋಳಿ ಸಾಕಾಣಿಕೆದಾರರು ಮತ್ತು ತಳಿಗಾರರ ಸಂಘ ಬೆಂಗಳೂರು ಅವರು ವಿಶ್ವ ಪಶು ವೈಧ್ಯಕಿಯ ದಿನಾಚರಣೆಯ ಸಂದರ್ಭದಲ್ಲಿ ಪಶು ವೈಧ್ಯಕೀಯ ಕ್ಷೇತ್ರದಲ್ಲಿ ನೀಡಿದ ಅತ್ಯುತ್ತಮ ಕೊಡುಗೆಯನ್ನು ಗಮನಿಸಿ ಮುದ್ದೇಬಿಹಾಳ ತಾಲೂಕಿನ ಢವಳಗಿ ಗ್ರಾಮದ ಪ್ರಾಥಮಿಕ ಆರೋಗ್ಯ ಪಶು ಇಲಾಖೆಯ ವೈಧ್ಯಾಧಿಕಾರಿ ಸಂಗನಗೌಡ ಎನ್ ಬಿರಾದಾರ ಅವ–ರಿಗೆ ಕರ್ನಾಟಕ ವೈಧ್ಯಕೀಯ ಪರಿಷತ್ತು ಹೆಬ್ಬಾಳ, ಬೆಂಗಳೂ–ರಿನಲ್ಲಿ ಎಪ್ರೀಲ್ 27 ರಂದು 2024ನೇ ಸಾಲಿನ ಅತ್ಯುತ್ತಮ ಪಶುವೈದ್ಯ ಪ್ರಶಸ್ತಿಯನ್ನು ನೀಡಿ ಗೌರವಿಸಿದರು.

# ಶ್ರೀನಿವಾಸ ಪ್ರಸಾದ್‌ರಂತಹ ಧೀಮಂತರು ಈಗೆಲ್ಲಿ :ಆಲಗೂರ

**ಉದಯರಶ್ಮಿ ನ್ಯೂಸ್**

ವಿಜಯಪುರ: ವಿ.ಶ್ರೀನಿವಾಸ್ ಪ್ರಸಾದ ಅವರು ಒಬ್ಬ ಧೀಮಂತ ಹಾಗೂ ಜನಾನುರಾಗಿ ನಾಯಕರಾಗಿದ್ದರು ಎಂದು ಕಾಂಗ್ರೆಸ್‌ನ ಲೋಕಸಭೆ ಅಭ್ಯರ್ಥಿ ಪ್ರೊ.ರಾಜು ಆಲಗೂರ ಅವರು ಹೇಳಿದರು.

ಸೋಮವಾರ ಬೆಳಗ್ಗೆ ಕಾಂಗ್ರೆಸ್ ಕಚೇರಿಯಲ್ಲಿ ನಡೆದ ಶ್ರದ್ಧಾಂಜಲಿ ಸಭೆಯಲ್ಲಿ ಭಾವುಕರಾಗಿ ಮಾತನಾಡಿ, ಅವರೊಂದಿಗಿದ್ದ ತಮ್ಮ ಸಂಬಂಧವನ್ನು ಮೆಲುಕು ಹಾಕಿದರು.



ಹಿಂದುಳಿದ ವರ್ಗದ ಹಿತ ಕಾಪಾಡಿದವರು ಶ್ರೀನಿವಾಸ್ ಪ್ರಸಾದ. ನಮಗೆ ಅವರು ದನಿಯಾಗಿದ್ದವರು. ಅವರೊಂದಿಗೆ ನನಗೆ ಉತ್ತಮ ಸಂಬಂಧವಿತ್ತು. ಅವರೊಬ್ಬ ಶ್ರೇಷ್ಠ ಸಂಸದೀಯ ಪಟುವಾಗಿದ್ದರು. ಮೊದಲ ಸಲ ನಾನು ಬಳ್ಳೊಳ್ಳಿ ಕ್ಷೇತ್ರದಲ್ಲಿ ನಿಂತಾಗ ನನ್ನ ಜತೆ ಶಕ್ತಿಯಾಗಿದ್ದರು. ಬಡವರು, ಅಲ್ಪಸಂಖ್ಯಾತರ ಪರ ಅವರ ಕಳಕಳಿ ಅಪಾರವಾಗಿತ್ತು. ಅಂತಹ ನಾಯಕ ಈಗ ಯಾರೂ ಇಲ್ಲ. ಹಿಂದೆ ನಮ್ಮೂರಿಗೆ ಕರೆಸಿ ಅವರಿಂದ ಭಾಷಣ ಮಾಡಿಸಿದ್ದೆ. ಚಳವಳಿಯ ದಿನಗಳಿಂದ ಜಿಲ್ಲೆಯಲ್ಲಿ ನಾನವರಿಗೆ ಒಡನಾಡಿಯಾಗಿದ್ದೆ. ಆರು ಸಲ ಸಂಸದರಾಗಿ, ಶಾಸಕರಾಗಿ ಅವರು ಜೀವಪರವಾಗಿ ಮಿಡಿದಿದ್ದಾರೆ ಎಂದು ಆಲಗೂರ ಅವರು ಹೇಳಿದರು.

## ಪಿಂಜಾರಾ ಸಮುದಾಯ ಬೆಂಬಲ

ಪಿಂಜಾರಾ ಹಾಗೂ ನದಾಫ್ ಸಮಾಜ ಬಾಂಧವರು ಕಾಂಗ್ರೆಸ್ ಅಭ್ಯರ್ಥಿ ರಾಜು ಆಲಗೂರರಿಗೆ ಸಂಪೂರ್ಣ ಬೆಂಬಲ ವ್ಯಕ್ತಪಡಿಸಿದ್ದಾರೆ.

ಕಾಂಗ್ರೆಸ್ ಕಚೇರಿಯಲ್ಲಿ ನಡೆದ ಸಭೆಯಲ್ಲಿ ನೂರಾರು ಜನ ಭಾಗವಹಿಸಿದ್ದರು. ನಮ್ಮ ಸಮುದಾಯವನ್ನು ನಿರ್ಲಕ್ಷಿಸಲಾಗಿದೆ. ನಮ್ಮ ಏಳ್ಗೆಗಾಗಿ ಉತ್ತಮ ಅಭ್ಯರ್ಥಿಯಾದ ಆಲಗೂರರಿಗೆ ಬೆಂಬಲಿಸುತ್ತಿರುವುದಾಗಿ ಹೇಳುದರು. ಸಂಘದ ಅಧ್ಯಕ್ಷ ಅಯೂಬ್ ಖಾನ್ ನದಾಫ್, ಕಾರ್ಯದರ್ಶಿ ಮೌಲಾಸಾಬ ಲಾಲಸಾಬ, ಮೀರಾ ನದಾಫ್, ಮೆಹಬೂಬ ಹತ್ತಳ್ಳಿ, ಅಬ್ದುಲ್ ಕರೀಮ್, ಅಬ್ದುಲ್ ಶಿವಣಗಿ ಅನೇಕರು ಇದ್ದರು.

# ಸಹಕಾರ ಕ್ಷೇತ್ರ ಬಲಪಡಿಸಲು ಅಗತ್ಯ ಯೋಜನೆ :ಹರ್ಷಗೌಡ

**ಉದಯರಶ್ಮಿ ನ್ಯೂಸ್**



ದೇವರಹಿಪ್ಪರಗಿ: ಜಿಲ್ಲೆಯ ಎಲ್ಲ ತಾಲ್ಲೂಕುಗಳಲ್ಲಿ ಸಹಕಾರಭಾರತಿ ಸಂಘಟನೆಯು ಮೂಲಕ ಅಭ್ಯಾಸವರ್ಗ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲು ಯೋಜನೆ ರೂಪಿಸಲಾಗುತ್ತಿದೆ ಎಂದು ಸಹಕಾರ ಭಾರತಿ ಜಿಲ್ಲಾಧ್ಯಕ್ಷ ಹರ್ಷಗೌಡ ಪಾಟೀಲ ಹೇಳಿದರು.

ಪಟ್ಟಣದ ಪತ್ತಿನ ಸಹಕಾರಿ ಸಂಘದ ಕಚೇರಿಯಲ್ಲಿ ಶನಿವಾರ ಜರುಗಿದ ಸಹಕಾರಿಗಳ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು. ಜಿಲ್ಲಾ ಸಹಕಾರ ಭಾರತಿ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಬಳಿಕ ಇದೇ ಪ್ರಥಮ ಬಾರಿಗೆ ಎಲ್ಲ ಸಹಕಾರ ಸಂಘಗಳಿಗೆ ಭೇಟಿ ನೀಡಲಾಗುತ್ತಿದೆ. ಮುಂಬರುವ ದಿನಗಳಲ್ಲಿ ಸಹಕಾರ ಕ್ಷೇತ್ರವನ್ನು ಬಲಪಡಿಸಲು ಅಗತ್ಯವಾದ ಯೋಜನೆಗಳನ್ನು, ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಆದ್ದರಿಂದ ಸಹಕಾರ ಕ್ಷೇತ್ರದ ಎಲ್ಲ ಹಿರಿಯರ ಮಾರ್ಗದರ್ಶನ ಹಾಗೂ ಸಹಕಾರ ಅಗತ್ಯವಾಗಿ ಬೇಕು ಎಂದರು.

ಸಹಕಾರ ಭಾರತಿ ವಿಭಾಗೀಯ ಕಾರ್ಯದರ್ಶಿ ಸುಭಾಸ್ ಇಂಡಿ ಪ್ರಾಸ್ತಾವಿಕವಾಗಿ ಮಾತನಾಡಿ, ಸಹಕಾರ ಭಾರತಿ ಯಾವತ್ತಿಗೂ ಸಹಕಾರ ಸಂಘ, ಸಂಸ್ಥೆಗಳನ್ನು ಸ್ವಾಯುತ್ತವಾಗಿರಿಸಲು ಮತ್ತು ಬಾಹ್ಯ ನಿಯಂತ್ರಣ ಮತ್ತು ರಾಜ–ಕೀಯ ಹಸ್ತಕ್ಷೇಪದಿಂದ ರಕ್ಷಿಸಲು ಬದ್ಧವಾಗಿದೆ. ಜೊತೆಗೆ ಎಂದಿಗೂ ಪ್ರಚಾರ ಬಯಸದೇ ಇರುವಂತಹ ಸಂಘಟನೆಯಾಗಿದೆ ಎಂದರು.

ಸಹಕಾರಭಾರತಿ ನಿಕಟಪೂರ್ವ ಜಿಲ್ಲಾಧ್ಯಕ್ಷ ಡಾ.ಆರ್.ಆರ್.ನಾಯಿಕ್ ಸ್ವಾಗತಿಸಿ, ಮಾತನಾಡಿದರು. ನಂತರ ನೂತನ ಅಧ್ಯಕ್ಷರು , ವಿಭಾಗೀಯ ಕಾರ್ಯದರ್ಶಿಗಳು ಸಹಿತ ಸಂಘಟನಾ ಕಾರ್ಯದರ್ಶಿ ದೀಪಕ ಶಿಂತ್ರೆ, ಪ್ರಧಾನ ಕಾರ್ಯದರ್ಶಿ ಪರಶುರಾಮ ಚಿಂಚಲಿ ಅವರನ್ನು ಸನ್ಮಾನಿಸಲಾಯಿತು.

ದೇವರಹಿಪ್ಪರಗಿ ಪತ್ತಿನ ಸಹಕಾರಿ ಸಂಘದ ನಿರ್ದೇಶಕರಾದ ಲಕ್ಷ್ಮಣ ಸುಗತೇಕರ, ಅಶೋಕ ಮಶಾನವರ, ಗುರುಬಾಳ ಯರಗಲ್, ಹಸನಸಾಬ್ ವಡ್ಡೋಡಗಿ, ಸಿದ್ದು ಮಸಬಿನಾಳ, ಮುಖ್ಯ ಕಾರ್ಯನಿರ್ವಾಹಕ ಎಂ.ಜಿ.ಹಿರೇಕುರುಬರ, ಸರೋಜಾ ಪಾಟೀಲ, ಸಮೃದ್ಧಿ ಸಹಕಾರ ಸಂಘದ ಅಧ್ಯಕ್ಷೆ ಸಂಗೀತಾ ನಾಯಿಕ್, ನಿರ್ದೇಶಕರಾದ ವೆಂಕಟೇಶ ಕುಲಕರ್ಣಿ, ಪಿ.ಜಿ.ಹಿರೇಮಠ, ಬಸವರಾಜ ಬಬಲೇಶ್ವರ, ಕೆ.ಎಸ್.ಕೋರಿ, ಎ.ಕೆ.ಹಿರೇಮಠ, ಮುಳಸಾವಳಗಿ ಪಿಕೆಪಿಎಸ್ ಅಧ್ಯಕ್ಷ ಸೋಮನಗೌಡ ಬಿರಾದಾರ, ಸಿಇಓ ಸಿದ್ದು ಆನಂದಿ ಸಿಬ್ಬಂದಿ ಬಸವರಾಜ ಸಜ್ಜನ, ಸುರೇಶ ಕುಲಕರ್ಣಿ, ಹಣಮಂತ ಹಡಪದ ಇದ್ದರು.

# ನಮ್ಮ ನಡೆ ಮತಗಟ್ಟೆ ಕಡೆ: ಸ್ವೀಪ್ ಧ್ವಜಾರೋಹಣ

**ಉದಯರಶ್ಮಿ ನ್ಯೂಸ್**



ಬಸವನಬಾಗೇವಾಡಿ: ಪಟ್ಟಣದ ಶಾಸಕರ ಮಾದರಿ ಗಂಡು ಮಕ್ಕಳ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಹೆಣ್ಣುಮಕ್ಕಳ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ಜಿಲ್ಲಾ ಸ್ವೀಪ್ ಸಮಿತಿ, ತಾಲೂಕಾಡಳಿತ, ತಾಲೂಕು ಪಂಚಾಯತ ಹಾಗೂ ಪುರಸಭೆ ಕಾರ್ಯಾಲಯದ ಸಹಯೋಗದಲ್ಲಿ ಸಾರ್ವತ್ರಿಕ ಲೋಕಸಭಾ ಚುನಾವಣೆಯಂಗವಾಗಿ ನಮ್ಮ ನಡೆ ಮತಗಟ್ಟೆ ಕಡೆ ಎಂಬ ಅಭಿಯಾನದಂಗವಾಗಿ ಸ್ವೀಪ್ ಧ್ವಜಾರೋಹಣ, ಪ್ರತಿಜ್ಞಾ ವಿಧಿ ಬೋಧನೆ, ನಮ್ಮ ನಡೆ ಮತಗಟ್ಟೆ ಸ್ವಚ್ಛತೆ ಕಡೆಗೆ ಕಾರ್ಯಕ್ರಮ ಭಾನುವಾರ ಜರುಗಿತು.

ಸ್ವೀಪ್ ಧ್ವಜಾರೋಹಣವನ್ನು ಸಹಾಯಕ ಚುನಾವಣಾಧಿಕಾರಿ ಗಂಗಪ್ಪ ಎಂ. ನೆರವೇರಿಸಿ ಮಾತನಾಡಿದ ಅವರು, ಮೇ.7 ರಂದು ನಡೆಯಲಿರುವ ಲೋಕಸಭಾ ಚುನಾವಣೆಯ ಮತದಾನದ ಜಾಗೃತಿಯ ಕುರಿತು ಸ್ವೀಪ್ ಸಮಿತಿಯಿಂದ ವಿವಿಧ ಜಾಗೃತಿ ಕಾರ್ಯಕ್ರಮಗಳು ನಿರಂತರವಾಗಿ ನಡೆಯುತ್ತಿವೆ. ಮತದಾರರು ತಪ್ಪದೇ ಮತದಾನ ಮಾಡುವ ಮೂಲಕ ಮತದಾನ ಮಾಡುವ ಪ್ರಜಾಪ್ರಭುತ್ವವನ್ನು ಗಟ್ಟಿಗೊಳ್ಳಿಸುವ ಕಾರ್ಯದಲ್ಲಿ ಪಾತ್ರವಹಿಸಬೇಕು. ಬಸವನಬಾಗೇವಾಡಿ ಮತಕ್ಷೇತ್ರದಲ್ಲಿ 230 ಮತಗಟ್ಟೆಗಳನ್ನು 122 ಸ್ಥಳಗಳಲ್ಲಿವೆ. ಎಲ್ಲ ಮತಗಟ್ಟೆಗಳಲ್ಲಿ ಸ್ವೀಪ್ ಧ್ವಜಾರೋಹಣ ಆಯಾ ಭಾಗದ ಮುಖ್ಯಸ್ಥರಿಂದ ನೆರವೇರುವ ಮೂಲಕ ಮತದಾನದ ಜಾಗೃತಿ ಮೂಡಿಸಲಾಗುತ್ತಿದೆ. ಎಲ್ಲ ಮತದಾರರು ತಮ್ಮ ನೆರೆಹೊರೆಯವ–ರಿಗೂ ಮತದಾನ ಕುರಿತು ಹೇಳಿ ವಿಧಾನಸಭೆ ಚುನಾವಣೆಯಲ್ಲಿ ನಡೆದ ಮತದಾನಕ್ಕಿಂತಲೂ ಹೆಚ್ಚಿನ ಪ್ರಮಾಣ ಮತದಾನ ಆಗಬೇಕಾದರೆ ಎಲ್ಲ ಮತದಾರರು ತಪ್ಪದೇ ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸಬೇಕೆಂದರು.

ತಾಲೂಕು ಪಂಚಾಯಿತಿ ಪ್ರಭಾರಿ ಇಓ, ತಾಲೂಕು ಸ್ವೀಪ್ ಸಮಿತಿ ಅಧ್ಯಕ್ಷ ಪ್ರಕಾಶ ದೇಸಾಯಿ ಮಾತನಾಡಿದರು.

ಪುರಸಭೆ ಆರೋಗ್ಯ ನಿರೀಕ್ಷಕ ಮಹೇಶ ಹಿರೇಮಠ ಪ್ರತಿಜ್ಞಾ ವಿಧಿ ಬೋಧಿಸಿದರು.

ಪುರಸಭೆ ಮುಖ್ಯಾಧಿಕಾರಿ ಎಚ್.ಎಸ್.ಚಿತ್ತರಗಿ ಸ್ವಾಗತಿಸಿ, ನಿರೂಪಿಸಿದರು.

ಕಾರ್ಯಕ್ರಮದಲ್ಲಿ ಬಸವನಬಾಗೇವಾಡಿ ತಹಸೀಲ್ದಾರ ವೈ.ಎಸ್.ಸೋಮನಕಟ್ಟಿ, ಕೊಲ್ಹಾರ ತಹಸೀಲ್ದಾರ ಎಸ್.ಎಸ್.ನಾಯಕಲಮಠ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕಾಧಿಕಾರಿ ಸಿ.ಜಿ.ಬಿರಾದಾರ, ಎಂಪಿಎಸ್ ಶಾಲೆಯ ಮುಖ್ಯಗುರು ಆರ್.ಡಿ.ಕಾಳಗಿ, ಆರೋಗ್ಯ ಇಲಾಖೆಯ ರಾಜಶೇಖರ ಚಿಂಚೋಳಿ, ಶಿಕ್ಷಣ ಇಲಾಖೆಯ ಎಂ.ವ್ಹಿ.ಗಬ್ಬೂರ, ತಾಪಂ ಇಲಾಖೆಯ ದೇವೇಂದ್ರ ಚೌರಿ, ಘೋರ್ಪಡೆ, ಮಡಿವಾಳಪ್ಪ ಬಿರಾದಾರ, ಪುರಸಭೆ ಸಿಬ್ಬಂದಿ, ಪೌರಕಾರ್ಮಿಕರು ಇತರರು ಇದ್ದರು.

ಮತದಾರರಿಗೆ ಜಾಗೃತಿ ಮೂಡಿಸಲು ಈ ಜಾಗೃತಿ ಧ್ವಜಾರೋಹಣ ಹಮ್ಮಿಕೊಂಡಿದ್ದರೂ ಯಾವುದೇ ಒಬ್ಬ ಮತದಾರ ಕಂಡುಬಾರದೇ ಕೇವಲ ಅಧಿಕಾ–ರಿಗಳಿಗೆ, ಪುರಸಭೆ ಸಿಬ್ಬಂದಿಗಳಿಗೆ ಸೀಮಿತವಾಗಿ ಜಾಗೃತಿ ಕಾರ್ಯಕ್ರಮ ನಡೆಯಿತು. ಶಾಲಾ ಆವರಣ ಸ್ವಚ್ಛತೆಯಿದ್ದರೂ ಅಧಿಕಾರಿಗಳು ಕೈಗೆ ಕೈಗವಸು, ಮುಖಕ್ಕೆ ಮಾಸ್ಕ್ ಹಾಕಿಕೊಂಡು ಕಸಬಾರಿಗೆ ಹಿಡಿದು ಕಸಗೂಡಿಸುವಂತೆ ಮಾಡಿ ನಮ್ಮ ನಡೆ ಮತಗಟ್ಟೆ ಸ್ವಚ್ಛತೆ ಕಡೆಗೆ ಅಭಿಯಾನಕ್ಕೆ ಪೋಟೋ ತೆಗೆಸಿಕೊಂಡ ಪ್ರಸಂಗ ನಡೆಯಿತು.

## ಅಪಘಾತ ಪ್ರಕರಣ: ಆರೋಪಿಗೆ ಆರು ತಿಂಗಳ ಶಿಕ್ಷೆ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಅಪಘಾತ ಪ್ರಕರಣವೊಂದರಲ್ಲಿ ಆರೋಪಿಗೆ ಆರು ತಿಂಗಳ ಶಿಕ್ಷೆ ಮತ್ತು 6ಸಾವಿರ ರೂಪಾಯಿಗಳ ದಂಢ ವಿಧಿಸಿ ಇಲ್ಲಿನ ಕಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶ ಸಂಪತ್ತಕುಮಾರ ಬಳೂಳಗಿಡದ ಆದೇಶಿಸಿದ್ದಾರೆ.

ಜನೆವರಿ 2018 ರಲ್ಲಿ ಆರೋಪಿ ರಾಮನಗೌಡ ಪಾಟೀಲ ತನ್ನ ಟ್ರ್ಯಾಕ್ಟರ್‌ನ್ನು ಜೋರಾಗಿ ನಿರ್ಲಕ್ಷತನದಿಂದ ಓಡಿಸಿ ರಸ್ತೆ ಬದಿಯಲ್ಲಿ ಹೊರಟಿದ್ದ 11 ವರ್ಷದ ಬಾಲಕನಿಗೆ ಹಾಯಿಸಿ ಅಪಘಾತ ಪಡಿಸಿ ಮರಣಹೊಂದುವಂತೆ ಮಾಡಿದ್ದ. ಈ ಕುರಿತು ಮಗುವಿನ ತಾಯಿ ನೀಡಿದ ದೂರಿನ ಮೇಲೆ ಪೊಲೀಸರು ಮುದ್ದೇಬಿಹಾಳ ನ್ಯಾಯಾಲಯಕ್ಕೆ ದೋಶಾರೋಪಣೆ ಪಟ್ಟಿಯನ್ನು ಸಲ್ಲಿಸಿದ್ದರು. ಬಳಿಕ ಪ್ರಕರಣದ ಸುದೀರ್ಘ ವಿಚಾರಣೆ ಇಲ್ಲನ ನ್ಯಾಯಾಲಯದಲ್ಲಿಯೇ ನಡೆದಿತ್ತು. ಕಳೆದ ಕೆಲ ದಿನಗಳಿಂದ ತಾಳಿಕೋಟೆಯಲ್ಲಿ ಕಿರಿಯ ಶ್ರೇಣಿ ಸಿವಿಲ್ ನ್ಯಾಯಾಲಯ ಪ್ರಾರಂಭವಾಗಿದ್ದು ಈ ಪ್ರಕರಣ ಆದೇಶ ಶನಿವಾರ ತಾಳಿಕೋಟೆಯ ನ್ಯಾಯಾಲಯದಲ್ಲಿಯೇ ಹೊರಬಿದ್ದಿದೆ.

## ಕುಡಿದ ಅಮಲಿನಲ್ಲಿ ಹೆಂಡತಿಯ ಮೇಲೆ ಮಾರಣಾಂತಿಕ ಹಲ್ಲೆ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಕುಡಿದ ಅಮಲಿನಲ್ಲಿ ಹೆಂಡತಿಯ ಮೇಲೆ ಮಾರಣಾಂತಿಕ ಹಲ್ಲೆ ಮಾಡಿ ಕ್ರೌರ್ಯ ಎಸಗಿರುವ ಘಟನೆ ಪಟ್ಟಣದ ತಾಳಿಕೋಟೆ ರಸ್ತೆಯಲ್ಲಿರುವ ಇದಗಾ ಬಳಿ ಶನಿವಾರ ನಡೆದಿದೆ.

ಯಲ್ಲವ್ವ ಕಾಳಗಿ ಗಂಭೀರವಾಗಿ ಗಾಯಗೊಂಡ ನತದೃಷ್ಟ ಮಹಿಳೆ. ಕಳೆದ ಎರಡು ವರ್ಷಗಳಿಂದ ಪತಿ ಸಿದ್ದಪ್ಪನ ಕಿರುಕುಳ ತಾಳದೇ ಸಹೋದರಿಯ ಮನೆಯಲ್ಲಿ ವಾಸವಾಗಿ ತರಕಾರಿ ವ್ಯಾಪಾರ ಮಾಡಿಕೊಂಡು ಜೀವನ ಸಾಗಿಸುತ್ತಿದ್ದಳು. ಶನಿವಾರ ಬೆಳಿಗ್ಗೆ ತರಕಾರಿ ಖರೀದಿಸಲೆಂದು ಹೊರಟಾಗ ಏಕಾಏಕಿ ಬಂದ ಸಿದ್ದಪ್ಪ ಕುಡುಗೋಲಿನಿಂದ ಯಲ್ಲವ್ವಳ ಕುತ್ತಿಗೆಗೆ ಹೊಡೆದು ಪರಾರಿಯಾಗಿದ್ದಾನೆ.

ಈ ಕುರಿತು ಮುದ್ದೇಬಿಹಾಳ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ಆರೋಪಿಯ ಹೆಡೆಮುರಿ ಕಟ್ಟುವ ವಿಶ್ವಾಸವನ್ನು ಪಿಎಸ್ಐ ಸಂಜೀವ ತಿಪರೆಡ್ಡಿ ವ್ಯಕ್ತಪಡಿಸಿದ್ದಾರೆ.

# ಕೇಂದ್ರ ಬಿಜೆಪಿ ಸರ್ಕಾರದಿಂದ ಬಡವರ ಲೂಟಿ :ತಾರನಾಳ

**ಉದಯರಶ್ಮಿ ನ್ಯೂಸ್**



ಮುದ್ದೇಬಿಹಾಳ: ಕೇಂದ್ರ ಬಿಜೆಪಿ ಸರ್ಕಾರ ದಿನಬಳಕೆಯ ಎಲ್ಲ ವಸ್ತುಗಳ ಮೇಲೆ ಜಿಎಸ್‌ಟಿ ಹಾಕಿ ಬಡವರನ್ನು ಲೂಟಿ ಹೊಡೆಯುತ್ತಿದೆ ಎಂದು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗುರು ತಾರನಾಳ ಆರೋಪಿಸಿದರು.


ತಾಲೂಕಿನ ಬಳಬಟ್ಟಿ ಗ್ರಾಮದಲ್ಲಿ ಲೋಕಸಭಾ ಚುನಾವಣೆಯ ವಿಜಯಪುರ ಕಾಂಗ್ರೆಸ್ ಅಭ್ಯರ್ಥಿ ರಾಜು ಆಲಗೂರ ಪರವಾಗಿ ಪ್ರಚಾರ ನಡೆಸಿ ಅವರು ಮಾತನಾಡಿದರು.

ಜನಸಾಮಾನ್ಯರ ಬದುಕಿನ ಮೇಲೆ ಜಿಎಸ್‌ಟಿ ಪರಿಣಾಮ ಬೀರಿದೆ. ದಿನಬಳಕೆಯ ವಸ್ತುಗಳು ಗಗನಕ್ಕೇರಿವೆ. ಜೀರಿಗೆ, ಅಡುಗೆ ಎಣ್ಣೆ ಸೇರಿದಂತೆ ಎಲ್ಲ ಪದಾರ್ಥಗಳು ಕೈಗೆಟುಗದಂತಾಗಿವೆ. ಬಡವರ ಪರವಾಗಿ ಬಿಜೆಪಿ ಸರ್ಕಾರ ಯಾವ ಯೋಜನೆಗಳನ್ನೂ ಜಾರಿಗೊಳಿಸಿಲ್ಲ. ಬದಲಾಗಿ ಅವರ ದುಡಿಮೆಯಲ್ಲಿ ದಿನಂಪ್ರತಿ ಜಿಎಸ್‌ಟಿ ನೆಪದಲ್ಲಿ ಲೂಟಿ ಹೊಡೆಯುತ್ತಿದೆ. ಈ ಬಾರಿ ಪ್ರತಿಯೊಬ್ಬರು ಕಾಂಗ್ರೆಸ್ ಗೆ ಮತ ನೀಡಿ ಪ್ರಚಂಡ ಬಹುಮತದಿಂದ ರಾಜು ಆಲಗೂರ ರನ್ನು ಆರಿಸಿ ತರಬೇಕು ಎಂದರು.

ಈ ವೇಳೆ ಕರ್ನಾಟಕ ಸರ್ಕಾರದ ಗ್ಯಾರಂಟಿ ಯೋಜನೆಯ ತಾಲೂಕು ಅಧ್ಯಕ್ಷ ಶಿವಶಂಕರಗೌಡ ಹಿರೇಗೌಡರ ಪ್ರಮುಖರಾದ ವಾಯ್.ಎಚ್.ವಿಜಯಕರ, ಸುಜಾತಾ ಸಿಂದೆ, ಲಕ್ಷ್ಮಣ ಚವ್ಹಾಣ, ಬುಡ್ಡಾಸಾ ಚಪ್ಪರಬಂದ, ಶಾಮ್ ಪಾತ್ರದ, ಮುತ್ತಣ್ಣ ಮುತ್ತಣ್ಣವರ, ಹಣಮಂತ ಕುರಿ, ತಿಪಣ್ಣ ಹುಗ್ಗಿ, ಯಮನಪ್ಪ ಪೂಜಾರಿ, ಬಸವರಾಜ ಚಿನಿವಾರ, ಗುರು ಸರೂರ, ಸಾಮಾಜಿ–ಕ ಜಾಲತಾಣದ ಅಧ್ಯಕ್ಷ ಸಂಗು ಚಲವಾದಿ ಸೇರಿದಂತೆ ಮತ್ತೀತರರು ಇದ್ದರು.

# ರೋಗ ಮತ್ತು ಭಯ

**ಉದಯರಶ್ಮಿ ದಿನಪತ್ರಿಕೆ**



ಒಂದು ತಂಪಾದ ಸಂಜೆಯ ವೇಳೆಯಲ್ಲಿ ಭಗವಂತ ಮತ್ತು ರೋಗ ಈ ಇಬ್ಬರೂ ಪರಸ್ಪರ ಉಭಯ ಕುಶಲೋಪರಿಗಳನ್ನು ವಿಚಾರಿಸಿಕೊಳ್ಳುತ್ತಿದ್ದರು. ಜನರು ಭಗವಂತನನ್ನು ಪ್ರಾರ್ಥಿಸಿದರೆ, ರೋಗವನ್ನು ಜನರು ತಮ್ಮಿಂದ ಬಹಳ ದೂರವಿಡುತ್ತಿದ್ದರು. ಹೀಗೆ ಇಬ್ಬರೂ ಮಾತನಾಡುತ್ತಿರುವಾಗ ಪರಸ್ಪರ ತಮ್ಮ ಕೆಲಸಗಳ ಕುರಿತು ಚರ್ಚಿಸುತ್ತಾ ಭಗವಂತ ಹೇಳುತ್ತಾನೆ, ನಾನು ಈ ಪ್ರಪಂಚದ ಎಲ್ಲಾ ಜೀವರಾಶಿಗಳನ್ನು ಕಾಪಾಡುತ್ತೇನೆ ಎಂದು. ಆಗ ರೋಗವು, ನಾನು ಭೀಕರ ರೋಗವನ್ನು ಪ್ರಪಂಚದ ಎಲ್ಲಾ ಕಡೆಗೂ ಮತ್ತು ಎಲ್ಲರಿಗೂ ಹರಡುತ್ತೇನೆ ಎಂದು ಹೇಳಿತು. ಹೀಗೆ ಮಾತನಾಡುತ್ತಾ ರೋಗವು ನಾನು ಒಂದು ತಿಂಗಳಲ್ಲಿ ಸುಮಾರು ಐನೂರು ಜನಕ್ಕೆ ರೋಗವನ್ನು ಹರಡಿ ಅವರನ್ನು ಸಾಯಿಸುತ್ತೇನೆ ಎಂದು ಭಗವಂತನಿಗೆ ಹೇಳಿತು. ಅಲ್ಲಿಗೆ ರೋಗ ಮತ್ತು ಭಗವಂತರ ಮಾತುಕತೆಗಳು ಮುಗಿದು, ಇಬ್ಬರೂ ತಮ್ಮ ತಮ್ಮ ಕೆಲಸದ ನಿಮಿತ್ತ ಅಲ್ಲಿಂದ ಹೊರಡುತ್ತಾರೆ.

ಸುಮಾರು ಒಂದೆರಡು ತಿಂಗಳು ಕಳೆದ ನಂತರ ಮತ್ತೆ ಭಗವಂತ ಮತ್ತು ರೋಗ ಇಬ್ಬರೂ ಅದೇ ಸ್ಥಳದಲ್ಲಿ ಪರಸ್ಪರ ಭೇಟಿಯಾಗುತ್ತಾರೆ. ಆಗ ಭಗವಂತನು, ಕಳೆದ ಬಾರಿ ನಾವಿಬ್ಬರು ಚರ್ಚಿಸಿದಾಗ ನೀನು ಒಂದು ತಿಂಗಳಲ್ಲಿ ಒಟ್ಟು ಐನೂರು ಮಂದಿಗೆ ರೋಗವನ್ನು ಹರಡಿ ಸಾಯಿಸುತ್ತೇನೆ ಎಂದು ತಿಳಿಸಿದ್ದೆ. ಆದರೆ ಈಗ ಸುಮಾರು ಐದು ಸಾವಿರಕ್ಕೂ ಹೆಚ್ಚು ಜನರು



ಸತ್ತಿದ್ದಾರೆ. ಏಕೆ ನೀನು ನಿನ್ನ ಮಾತನ್ನು ತಪ್ಪಿದೆ? ಎಂದು ರೋಗದಲ್ಲಿ ಕೇಳುತ್ತಾನೆ. ಆಗ ರೋಗವು ನಗುತ್ತಾ, ನಾನು ನಿನಗೆ ಕೊಟ್ಟ ಮಾತನ್ನು ಎಲ್ಲೂ ತಪ್ಪಿಲ್ಲ, ನಾನು ನಿನಗೆ ತಿಳಿಸಿದ್ದಂತೆ ಒಟ್ಟು ಐನೂರು ಮಂದಿಗಷ್ಟೇ ರೋಗವನ್ನು ಹರಡಿದ್ದೇನೆ. ಆದ–ರೆ ಉಳಿದ ನಾಲ್ಕೂವರೆ ಸಾವಿರ ಮಂದಿ ರೋಗದ ಭಯದಿಂದಲೇ ತಮ್ಮ ಪ್ರಾಣವನ್ನು ಬಿಟ್ಟಿದ್ದಾರೆ, ಅದಕ್ಕೆ ನಾನೇನು ಮಾಡಲಿ ಎಂದು ಭಗವಂತನಿಗೆ ಹೇಳಿತು.

ಸಮಾಜದಲ್ಲಿ ಯಾವುದೇ ಒಂದು ಸಮಸ್ಯೆಯಿಂದ ಕಡಿಮೆ ಮಂದಿ ಹಾನಿಗೆ ಒಳಗಾದರೆ ಭಯದಿಂದ ಹಾನಿಗೆ ಒಳಗಾಗುವವರ ಸಂಖ್ಯೆಯು ಅದರ ದುಪ್ಪಟ್ಟಿರುತ್ತದೆ. ಯಾರು ಸಮಸ್ಯೆಯ ವಿರುದ್ಧ ಸೆಟೆದು ನಿಂತು ಹೋರಾಡುತ್ತಾರೋ ಅವರಿಗೆ ಬದುಕಿನ ಹಾದಿಯು ಗೋಚರಿಸುತ್ತದೆ. ಸಮಸ್ಯೆಗೆ ಭಯಪಟ್ಟು ಕುಳಿತವ ಎಲ್ಲರಿಗಿಂತ ಮೊದಲೇ ಸಮಸ್ಯೆಯ ಸುಳಿಗೆ ಸಿಲುಕಿ ನರಳಾಡಿ ಬದುಕನ್ನು ಅಂತ್ಯ ಮಾಡಿಕೊಳ್ಳುತ್ತಾನೆ. 'ಧೈರ್ಯಂ ಸರ್ವತ್ರ ಸಾಧನಂ'. ಎಂಬ ಗಾದೆ ಮಾತಿನಂತೆ ಧೈರ್ಯವಿರುವಾತ ಎಂತಹ ಸಮಸ್ಯೆಯನ್ನೂ ಧೈರ್ಯ ಕೆಡದೇ ಎದುರಿಸಿ ಗೆದ್ದು, ಭಯಕ್ಕೇ ಸವಾಲಾಗಿ ಬೆಳೆಯುತ್ತಾನೆ.



– ಸಂತೋಷ್ ರಾವ್ ಪೆರ್ಮುಡ, ಪೆರ್ಮುಡ ಮನೆ, ಪಟ್ರಮೆ ಗ್ರಾಮ ಮತ್ತು ಅಂಚೆ ಬೆಳ್ತಂಗಡಿ ತಾಲೂಕು,

# ಗುರು–ಶಿಷ್ಯರ ಸಂಬಂಧ ಜಗತ್ತಿನ ಶ್ರೇಷ್ಠ ಸಂಬಂಧ :ವಾಮದೇವ ಶ್ರೀ

**ಉದಯರಶ್ಮಿ ನ್ಯೂಸ್**



ದೇವರಹಿಪ್ಪರಗಿ: ಗುರು ಮತ್ತು ಶಿಷ್ಯರ ಸಂಬಂಧ ಜಗತ್ತಿನ ಶ್ರೇಷ್ಠ ಹಾಗೂ ದೊಡ್ಡ ಸಂಬಂಧವಾಗಿದೆ ಎಂದು ಎಮ್ಮಿಗನೂರು ಹಂಪಿಸಾವಿರದೇವರಮಠದ ವಾಮದೇವ ಮಹಾಂತ ಸ್ವಾಮೀಜಿ ಹೇಳಿದರು.

ಪಟ್ಟಣದ ಮಲ್ಲಯ್ಯ ದೇವಸ್ಥಾನ ಆವರಣದಲ್ಲಿ ಭಾನುವಾರ ಜರುಗಿದ ಬಿ.ಎಲ್.ಡಿ.ಇ ಸಂಸ್ಥೆಯ ದಿ.ಎ.ಬಿ.ಸಾಲಕ್ಕಿ ಪ್ರೌಢಶಾಲೆಯ 1990–91 ನೇ ಸಾಲಿನ ವಿದ್ಯಾರ್ಥಿ,ವಿದ್ಯಾರ್ಥಿನೀಯರ ಗುರುವಂದನಾ ಹಾಗೂ ಸ್ನೇಹಿತರ ಸಮ್ಮೇಲನದ ಸಾನಿಧ್ಯ ವಹಿಸಿ ಮಾತನಾಡಿದರು.

ಜಗತ್ತಿನಲ್ಲಿ ಗುರುವಿಗೆ ಉನ್ನತ ಸ್ಥಾನವಿದೆ. ಸುವರ್ಣಮಾಲೆ ಧ–ರಿಸಿದವರಿಗಿಂತ ವರ್ಣಮಾಲೆ ಧ–ರಿಸಿದವರು ಶ್ರೇಷ್ಠರು. ಶಿಕ್ಷಣವೇ ಶ್ರೇಷ್ಠ ಸಂಪತ್ತು ಜೊತೆಗೆ ಸ್ನೇಹಕ್ಕಿಂತ ಹಿರಿದಾದದ್ದು ಯಾವುದು ಇಲ್ಲ. ಇಲ್ಲಿ ಗುರು ಶಿಷ್ಯರ ಸ್ನೇಹ ಸಂಬಂಧ ಅತ್ಯಂತ ಪವಿತ್ರವಾದದು ಎಂದರು.

ಬೆಂಗಳೂರು ಮಾರತಹಳ್ಳಿ ವಿಭೂತಿಪುರ ವೀರಸಿಂಹಾಸನ ಸಂಸ್ಥಾನ ಮಠದ ಮಹಾಂತಲಿಂಗ ಶ್ರೀಗಳು ಮಾತನಾಡಿ, ಅಕ್ಷರಜ್ಞಾನ ನೀಡಿದ ಗುರುಗಳ ಉಪಕಾರವನ್ನು ಸ್ಮ–ರಿಸುವ ಮೂಲಕ ಗುರುವಂದನಾ ಕಾರ್ಯಕ್ರಮ ಜರುಗುತ್ತಿರುವು ಅತ್ಯಂತ ಶ್ಲಾಘನೀಯ. ಇಂದು ನಾವೆಲ್ಲ ಏನಾಗಿದ್ದೇವೆಯೋ ಅದಕ್ಕೆಲ್ಲಾ ಕಾರಣ ನಮ್ಮ ಪ್ರಾಥ–ಮಿಕ ಹಾಗೂ ಪ್ರೌಢಶಾಲೆ ಶಿಕ್ಷಕ ವರ್ಗ. ಇವರಿಂದ ಶಾಲೆಯ ಪಾಠ ಮಾತ್ರವಲ್ಲ, ಭವಿಷ್ಯದ ಬದುಕಿನ ಪಾಠವು ಭೋಧಿಸಲ್ಪಡುತ್ತದೆ ಎಂದರು.

ಉದ್ಘಾಟಕರಾಗಿ ಆಗಮಿಸಿದ ನಿವೃತ್ತ ಪ್ರಾಚಾರ್ಯ ಎಸ್.ಬಿ.ಮಿರ್ಜಿ, ತಹಶೀಲ್ದಾರ ಪ್ರಕಾಶ ಸಿಂದಗಿ, ಅಂಕಣಕಾರ ಮಂಜುನಾಥ ಜುನಗೊಂಡ, ಶಿಕ್ಷಕ ಎಸ್.ಎಂ.ಶೆಟ್ಟೆಣ್ಣವರ ಮಾತನಾಡಿದರು. ನಿವೃತ್ತ ಮುಖ್ಯೋಪಾಧ್ಯಾಯ ಎ.ಆರ್.ಭತಗುಣಕಿ ಅಧ್ಯಕ್ಷತೆ ವಹಿಸಿದ್ದರು.

ಶಿಕ್ಷಕರಾದ ಬಿ.ಸಿ.ಹಿರೇಮಠ, ಬಿ.ಜಿ. ಅರಳಮಟ್ಟಿ, ಎಸ್.ಎಸ್. ರಾಮಗೊಂಡ, ವಿ.ಎಮ್. ಕೌಲಗಿ, ಬ್ರಹ್ಮಾನಂದ ಪಾಟೀಲ, ಸುಶೀಲಾಬಾಯಿ ಹದನೂರ, ಶಕುಂತಲಾ ಭಂಡಕ್ಕ, ಎಸ್.ಎಸ್. ಹುರಕಡ್ಲಿ, ಮಲ್ಲಮ್ಮ ನಾಯ್ಕೋಡಿ, ಅಶೋಕ ಗಚ್ಚಿನಮಠ, ಜೆ.ಆರ್. ದಾನಗೊಂಡ, ಶಾಂತಪ್ಪ ದೇಸಾಯಿ, ಎಸ್.ಎಂ.ಬಟವಾಲ್ ಹಾಗೂ ಜಿ.ಜಿ.ಜುಮನಾಳರನ್ನು ಸನ್ಮಾನಿಸಲಾಯಿತು.

ಇದೇ ಸಂದರ್ಭದಲ್ಲಿ ಅಗಲಿದ ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿ, ವಿದ್ಯಾರ್ಥಿನೀಯರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ವಿಶೇಷ ಸಾಧನೆ ಮಾಡಿದ ಬಸವರಾಜ ಕೌಲಗಿ, ಬಾಳಯ್ಯ ಇಂಡಿಮಠ, ಈರಣಗೌಡ ಪಾಟೀಲ, ಅಯ್ಯನಗೌಡ ಪಾಟೀಲ, ಅನೀಲ ಪೋರವಾಲ್, ಕಾಶೀನಾಥ ಸಾಲಕ್ಕಿ, ಶಂಕರಗೌಡ ಪಾಟೀಲ, ಸಿದ್ದು ಮೇಲಿನಮನಿ, ಶ್ರೀಕಾಂತ ಕಾಖಂಡಕಿ, ಕಮಲಾಕ್ಷಿ ಕುಂಬಾರ, ಸೋಮನಗೌಡ ಬಿರಾದಾರ, ಸಬಿನಾ ಕಲಾಲ್ ಇವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಶಿವಾನಂದ ಅಸಂತಾಪೂರ, ಸುರೇಶ ನಾಯಿಕ್ ವಸಂತ ನಾಡಗೌಡ, ಸಂಜೀವ ವಗ್ಗರ, ರಾಜು ನಾಯ್ಕರ್, ರಮೇಶ ಮಣೂರ, ಬಸನಗೌಡ ಪಾಟೀಲ, ಕುಮಾರಸ್ವಾಮಿ ಹಿರೇಮಠ, ಭಾರತಿ ನಾಡಗೌಡ, ಸುಜಾತಾ ಈಳಗೇರ, ಕಾಶೀಬಾಯಿ ಪಾಟೀಲ, ಕಾವೇರಿ ಬಡಿಗೇರ, ನಾಗಮ್ಮಾ ಕೋರಿ, ಸುನೀತಾ ನಾಡಗೌಡ ಸೇರಿದಂತೆ ಇತರರು ಇದ್ದರು.



# ಫೌಂಡೇಶನ್ ಫಾರ್ ಇನೋವೇಶನ್‌ಗೆ ರೂ.3.92 ಕೋಟಿ ಅನುದಾನ

**ಉದಯರಶ್ಮಿ ನ್ಯೂಸ್**

ವಿಜಯಪುರ: ಪ್ರತಿಷ್ಠಿತ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಲಾಭರಹಿತ ಸಂಸ್ಥೆಯಾದ ಫೌಂಡೇಶನ್ ಫಾರ್ ಇನೋವೇಶನ್ ಗೆ ರಾಷ್ಟ್ರೀಯ ವಿಜ್ಞಾನ ಮತ್ತು ತಂತ್ರಜ್ಞಾನ ವಾಣಿಜ್ಯೋದ್ಯಮ ಮಂಡಳಿ ಇನಕ್ಲೂಸಿವ್ ಟೆಕ್ನಾಲಜಿ ಬ್ಯೂಸಿನೆಸ್ ಇನಕ್ಯೂಬೇಟರ್ ಸ್ಥಾಪನೆಗೆ ರೂ. 3.92 ಕೋಟಿ ಅನುದಾನ ನೀಡಿದೆ.

ಈ ಕುರಿತು ಮಾಧ್ಯಮ ಪ್ರಕಟಣೆ ನೀಡಿರುವ ಶ್ರೀ ಬಿ. ಎಂ. ಪಾಟೀಲ ವೈದ್ಯಕೀಯ ಕಾಲೇಜು, ಆಸ್ಪತ್ರೆ ಮತ್ತು ಸಂಶೋಧನೆ ಕೇಂದ್ರದ ಪ್ರಾಚಾರ್ಯ ಡಾ. ಎಂ. ಬಿ. ಪಾಟೀಲ, ಇನಕ್ಲೂಸಿವ್ ಟಕ್ನಾಲಜಿ ಬ್ಯೂಸಿನೆಸ್ ಇನಕ್ಯೂಬೇಟರ್ ಸ್ಥಾಪನೆಗೆ ಒಟ್ಟು ರೂ. 5 ಕೋ. ಅಗತ್ಯವಿತ್ತು. ಈಗ ಕೇಂದ್ರ ಸರಕಾರ ರೂ. 3.92 ಕೋ. ಹಣ ಬಿಡುಗಡೆ ಮಾಡಲಿದ್ದು, ಉಳಿದ ರೂ. 1.08 ಕೋ. ಹಣವನ್ನು ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯ ಭರಿಸಲಿದೆ. ವೈದ್ಯಕೀಯ ಕಾಲೇಜು ಕೇಂದ್ರದಿಂದ ಈ ಯೋಜನೆಯಡಿ ಅನುದಾನ ಪಡೆಯುತ್ತಿರುವುದು ಅತೀ ವಿರಳವಾಗಿದ್ದು, ಬಿ.ಎಲ್.ಡಿ.ಇ ವೈದ್ಯಕೀಯ ಕಾಲೇಜಿಗೆ ಇದು ಹೆಮ್ಮೆಯ ವಿಷಯವಾಗಿದೆ ಎಂದು ಅವರು ತಿಳಿಸಿದ್ದಾರೆ.

ಈ ಕೇಂದ್ರ ಸ್ಥಾಪನೆಯಿಂದ ಸ್ಟಾರ್ಟಅಪ್ ಪ್ರಾರಂಭಿಸುವ ಕನಸು ಕಾಣುವ ಉದಯೋನ್ಮುಖ ಯುವ ಉದ್ದಿಮೆದಾರರಿಗೆ ಸ್ಟಾರ್ಟಅಪ್ ನೋಂದಣಿ, ಸಂಶೋಧನೆ, ಉತ್ಪಾದನೆ ಹಾಗೂ ಮಾರುಕಟ್ಟೆ ವ್ಯವಸ್ಥೆಯ ಬಗ್ಗೆ ಸಂಪೂರ್ಣ ಮಾರ್ಗದರ್ಶನ, ತಾಂತ್ರಿಕ ಸಹಾಯ ಸಿಗಲಿದೆ. ಬಿ.ಎಲ್.ಡಿ.ಇ ಫೌಂಡೇಶನ್ ಫಾರ್ ಇನೋವೇಶನ್ ಈ ಕುರಿತು ಬಹಳ ಹಿಂದೆಯೇ ಪ್ರಸ್ತಾವನೆ ಕಳುಹಿಸಿತ್ತು. ಈಗ ಈ ಪ್ರಸ್ತಾವನೆಗೆ ಅನುಮತಿ ದೊರೆತಿದೆ.

ವೈದ್ಯಕೀಯ, ಕೃಷಿ, ಮಾಹಿತಿ ಮತ್ತು ತಂತ್ರಜ್ಞಾನ, ಆಹಾರ ಸಂಸ್ಕರಣೆ ಸೇರಿದಂತೆ ಇತರ ಕ್ಷೇತ್ರಗಳಲ್ಲಿ ಸ್ಟಾರ್ಟಪ್ ಪ್ರಾರಂಭಿಸಲು ಮತ್ತು ಸಂಶೋಧನೆ ನಡೆಸಲು ಆಸಕ್ತಿ ಹೊಂದಿರುವವರು ಈ ಕೇಂದ್ರವನ್ನು ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ. ಅಲ್ಲದೇ, ಈ ಸಂಸ್ಥೆಯ ಸ್ಥಾಪನೆಯಿಂದ ಯುವಕರು, ವಿದ್ಯಾರ್ಥಿಗಳು ಹಾಗೂ ಅಧ್ಯಾಪಕರು ಹಾಗೂ ಯುವ ಉದ್ಯಮಿಗಳಲ್ಲಿ ಸ್ಟಾರ್ಟಅಪ್ ಅಭಿರುಚಿಯನ್ನು ಉತ್ತೇಜಿಸಲು ಮತ್ತು ಅವರಲ್ಲಿ ನಾವೀನ್ಯತೆ ಮತ್ತು ಉದ್ಯಮಶೀಲತೆಯ ಸಂಸ್ಕೃತಿಯನ್ನು ಬೆಳೆಸಿ ಪ್ರೋತ್ಸಾಹಿಸಲು ಅನುಕೂಲವಾಗಲಿದೆ.

ಈ ಅನುದಾನ ಪಡೆಯುವಲ್ಲಿ ನಿಕಟಪೂರ್ವ ಪ್ರಾಚಾರ್ಯ ಡಾ. ಅರವಿಂದ ಪಾಟೀಲ, ಡಾ. ಅನಿಲಕುಮಾರ ರೆಡ್ಡಿ, ಡಾ. ಆರ್. ಚಂದ್ರಮೌಳಿರೆಡ್ಡಿ ಮತ್ತು ಡಾ. ಗವೀಶ ಹಾದಿಮನಿ, ಡಾ. ದೀಪಕಕುಮಾರ ಚವ್ಹಾಣ ಅವರು ಕೇಂದ್ರ ಸರಕಾರದ ಸಂಬಂಧಿಸಿದ ಇಲಾಖೆಯೊಂದಿಗೆ ನಿಕಟ ಸಂಪರ್ಕ ಹೊಂದಿ ಪೂರಕ ದಾಖಲೆಗಳನ್ನು ಒದಗಿಸಿದ್ದರು. ಈಗ ಎಲ್ಲರ ಪ್ರಯತ್ನಕ್ಕೆ ಯಶಸ್ಸು ಸಿಕ್ಕಿದ್ದು, ಕೇಂದ್ರ ಸರಕಾರ 3.92 ಕೋಟಿ ಅನುದಾನ ನೀಡುವ ಮೂಲಕ ಈ ಭಾಗದಲ್ಲಿ ಸಂಶೋಧನೆಗೆ ಹೆಚ್ಚಿನ ಉತ್ತೇಜನ ನೀಡದಂತಾಗಿದೆ.

ಇನಕ್ಲೂಸಿವ್ ಟೆಕ್ನಾಲಜಿ ಬ್ಯೂಸಿನೆಸ್ ಇನಕ್ಯೂಬೇಟರ್ ಸ್ಥಾಪನೆಗೆ ಕೇಂದ್ರದಿಂದ ರೂ. 3.92 ಕೋಟಿ ಅನುದಾನ ಪಡೆಯಲು ಶ್ರಮಿಸಿದ ಎಲ್ಲರಿಗೂ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಕುಲಾಧಿಪತಿ ಡಾ. ಎಂ. ಬಿ. ಪಾಟೀಲ ಅಭಿನಂದನೆ ಸಲ್ಲಿಸಿದ್ದಾರೆ. ಅಲ್ಲದೇ, ವಿವಿಯ ಸಮಕುಲಾಧಿಪತಿ ಡಾ. ವೈ. ಎಂ. ಜಯರಾಜ, ಕುಲಪತಿ ಡಾ. ಆರ್. ಎಸ್. ಮುಧೋಳ ಸಂತಸ ವ್ಯಕ್ತಪಡಿಸಿದ್ದಾರೆ ಎಂದು ಕಾಲೇಜಿನ ಪ್ರಾಚಾರ್ಯ ಡಾ. ಎಂ. ಬಿ. ಪಾಟೀಲ ಮಾಧ್ಯಮ ಪ್ರಕಟಣೆಯಲ್ಲಿ ಮಾಹಿತಿ ನೀಡಿದ್ದಾರೆ.

# ತರಬಂಡಿ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಣೆ



**ಉದಯರಶ್ಮಿ ನ್ಯೂಸ್**

ಢವಳಗಿ: ಮುದ್ದೇಬಿಹಾಳ ತಾಲ್ಲೂಕಿನ ಬಸರಕೋಡ ಗ್ರಾಮದ ಶ್ರೀ ಪವಾಡ ಬಸವೇಶ್ವರರ ಜಾತ್ರಾ ಮಹೋತ್ಸವದ ಅಂಗವಾಗಿ ಎಪ್ರಿಲ್ 27ರಂದು ನಡೆದ ರಾಜ್ಯ ಮಟ್ಟದ ತರಬಂಡಿ ಸ್ಪರ್ಧೆಯಲ್ಲಿ(ಉತ್ತರ ಕರ್ನಾಟಕದ ಪ್ರಸಿದ್ಧ ಸ್ಪರ್ಧೆ ) ರೂಢಗಿ ಗ್ರಾಮದ ಶ್ರೀಶೈಲ ದೊಡಮನಿ ಮತ್ತು ಬ್ಯಾಲ್ಯಾಳ ಗ್ರಾಮದ ಅವ್ವನಗೌಡ ಗ್ವಾತಗಿ ಅವರ ಎತ್ತುಗಳು ಕಮೀಟಿಯ ನಿಗದಿತ ಸಮಯದಲ್ಲಿ 1335.1 ಅಡಿ ದೂರ ಕ್ರಮಿಸಿ ವಿಜಯಮಾಲೆ ಧರಿಸಿಕೊಂಡು ಸ್ಲೇಂಡರ್ ಪ್ಲಸ್ ಬೈಕ್ ತಮ್ಮದಾಗಿಸಿಕೊಂಡವು.

ಶ್ರೀ ಪವಾಡ ಬಸವೇಶ್ವರರ ಜಾತ್ರಾ ಕಮೀಟಿಯ ಅಧ್ಯಕ್ಷ ಕೆ ವಾಯ್ ಬಿರಾದಾರ, ಶ್ರೀಶೈಲ ಮೇಟಿ, ಅಪ್ಪುದನಿ ನಾಡಗೌಡ, ವಿರೇಶ ಮಂಕಣಿ, ನಾಗರಾಜ ತಂಗಡಗಿ, ಬಸವರಾಜ ಮಂಕಣಿ, ನಾಗರಾಜ ಕಮತರ, ರಾಜು ಮೇಟಿ , ಸದಾಶಿವ ಸುಳಿಭಾವಿ, ಬಸವರಾಜ ಸಜ್ಜನ, ಆನಂದ ಬೀಳಗಿ ಮತ್ತು ಜಾತ್ರಾ ವ್ಯವಸ್ಥಾಪಕ ಮಂಡಳಿಯ ಸದಸ್ಯರು ಸೇರಿಕೊಂಡು ಪ್ರಥಮ ಸ್ಥಾನದಿಂದ 10ನೆ ಸ್ಥಾನದವರಗೆ ಬಹುಮಾನವನ್ನು ವಿತರಿಸಿದರು ಸ್ಪರ್ಧೆಯಲ್ಲಿ ಒಟ್ಟು 26 ಜೋಡಿ ಎತ್ತುಗಳು ಭಾಗವಹಿಸಿದ್ದವು.

ಸುತ್ತಮುತ್ತಲಿನ ಗ್ರಾಮದ ಅಭಿಮಾನಿಗಳು ಮತ್ತು ಬೆಂಬಲಿಗರು ಪಟಾಕಿ ಸಿಡಿಸಿ ಗುಲಾಲು ಎರಚಿಕೊಂಡು ವಿಜಯೋತ್ಸವವನ್ನು ಆಚರಿಸಿದರು. ಸಾವಿರಾರು ಅಭಿಮಾನಿಗಳು ವಿಜಯೋತ್ಸವದಲ್ಲಿ ಪಾಲ್ಗೊಂಡಿದ್ದರು.

## ಲೋಕಸಭಾ ಚುನಾವಣೆ-2024 । ನಮ್ಮ ನಡೆ ಮತಗಟ್ಟೆ ಕಡೆ ಕಾರ್ಯಕ್ರಮಕ್ಕೆ ಚಾಲನೆ

# ಭವಿಷ್ಯದ ಆಲೋಚನೆಯೊಂದಿಗೆ ಕಡ್ಡಾಯವಾಗಿ ಮತ ಚಲಾಯಿಸಿ :ಡಿಸಿ ಭೂಬಾಲನ್




**ಉದಯರಶ್ಮಿ ನ್ಯೂಸ್**

ವಿಜಯಪುರ: ಸುಭದ್ರ ರಾಷ್ಟ್ರ ನಿರ್ಮಾಣ ಹಾಗೂ ಪ್ರಜಾಪ್ರಭುತ್ವದ ಭದ್ರ ಬುನಾದಿಗಾಗಿ ಭವಿಷ್ಯದ ಆಲೋಚನೆಯೊಂದಿಗೆ ಪ್ರತಿಯೊಬ್ಬರು ಮೇ.7 ರಂದು ಮತಗಟ್ಟೆಗೆ ತೆರಳಿ ಕಡ್ಡಾಯವಾಗಿ ಮತದಾನ ಮಾಡುವಂತೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಕರೆ ನೀಡಿದರು.

ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಅಂಗವಾಗಿ ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ, ಮಹಾನಗರ ಪಾಲಿಕೆ, ಸಂಂ-ಯುಕ್ತಾಶ್ರಯದಲ್ಲಿ ಭಾನುವಾರ ನಗರದ ದರಬಾರ ಶಿಕ್ಷಣ ಸಂಸ್ಥೆಯಲ್ಲಿ ಹಮ್ಮಿಕೊಂಡ "ನಮ್ಮ ನಡೆ ಮತಗಟ್ಟೆ ಕಡೆ" ಕಾರ್ಯಕ್ರಮದಲ್ಲಿ ಚುನಾವಣಾ ಧ್ವಜಾರೋಹಣ ನೆರವೇರಿಸಿ, ಮತದಾನದ ಸಹಿ ಸಂಗ್ರಹ ಅಭಿಯಾನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮತದಾನ ಮಾಡುವುದು ನಮ್ಮೆಲ್ಲರ ಹಕ್ಕು ಹಾಗೂ ಜವಾಬ್ದಾರಿ. ಪ್ರಜಾಪ್ರಭುತ್ವದಲ್ಲಿ ಇಂತಹ ಅವಕಾಶ ಸಂವಿಧಾನ ಕಲ್ಪಿಸಿದೆ. ಸಂವಿಧಾನ ನೀಡಿದ ಅಧಿಕಾರವನ್ನು ಕಳೆದುಕೊಳ್ಳಬಾರದು. ಮತದಾನ ಮಾಡುವ ಮುಲಕ ಪ್ರಜಾಪ್ರಭುತ್ವ ಹಬ್ಬ ಆಚರಿಸಬೇಕು. 18 ವರ್ಷ ತುಂಬಿದ ಎಲ್ಲ ಅರ್ಹ ಮತದಾರರು ಕಡ್ಡಾಯವಾಗಿ ಮತದಾನ ಮಾಡುವ ಮೂಲಕ ತಮ್ಮ ಕರ್ತವ್ಯವನ್ನು ನಿಭಾಯಿಸಬೇಕು ಎಂದು ಹೇಳಿದರು.

ನಮ್ಮ ದೇಶವನ್ನು 5 ವರ್ಷಗಳ ಕಾಲ ಆಡಳಿತ ನಡೆಸುವ ಸರ್ಕಾರದ ಆಯ್ಕೆ ನಮ್ಮ ಕೈಯಲ್ಲಿದೆ. ಸಂವಿಧಾನ ನೀಡಿದ ಮತದಾನದ ಹಕ್ಕಿನಿಂದ ಯಾರೂ ಕೂಡ ವಂಚಿತರಾಗದೇ ಪ್ರತಿಯೊಬ್ಬ ಅರ್ಹ ಮತದಾರರು ಮತದಾನ ದಿನ ಮತಗಟ್ಟೆಗಳಿಗೆ ತೆರಳಿ ಮುಂದಿನ ಭವಿಷ್ಯದ ಆಲೋಚನೆಯೊಂದಿಗೆ ಯೋಗ್ಯ ಅಭ್ಯರ್ಥಿಗಳ ಆಯ್ಕೆಗಾಗಿ ಕಡ್ಡಾಯವಾಗಿ ಮತದಾನ ಮಾಡಬೇಕು ಎಂದು ಅವರು ಹೇಳಿದರು.

ಜಿಲ್ಲೆಯಲ್ಲಿ ಸ್ಥಾಪಿಸಲಾದ ಮತಗಟ್ಟೆಗಳಲ್ಲಿ ಮತದಾರರ ಅನುಕೂಲಕ್ಕಾಗಿ ಎಲ್ಲ ಮತಗಟ್ಟೆಗಳಲ್ಲಿ ಬಿಸಿಲಿನ ರಕ್ಷಣೆಗಾಗಿ ನೆರಳಿನ ವ್ಯವಸ್ಥೆ, ಕುಡಿಯುವ ನೀರು, ಶೌಚಾಲಯ, ವಿಕಲಚೇತನರಿಗಾಗಿ ಯಾರ್ಂಪ್, ಅಶಕ್ತರಿಗೆ ವ್ಹೀಲ್ ಚೇರ್ ಸೇರಿದಂತೆ ಹಲವು ವ್ಯವಸ್ಥೆಗಳನ್ನು ಚುನಾವಣಾ ಆಯೋಗದ ನಿರ್ದೇಶನದಂತೆ ಕೈಗೊಳ್ಳಲಾಗಿದೆ ಎಂದು ಅವರು ಹೇಳಿದರು.

ಜಿಲ್ಲೆಯಲ್ಲಿ ಶೇಕಡಾ ನೂರರಷ್ಟು ಮತದಾನ ಪ್ರಮಾಣ ಹೆಚ್ಚಿಸುವ ಗುರಿ ಹೊಂದಲಾಗಿದೆ. ಗ್ರಾಮಿಣ ಹಾಗೂ ನಗರ ಪ್ರದೇಶದಲ್ಲಿ ಕಳೆದ ಚುನಾವಣೆಗಳಲ್ಲಿ ಅತಿ ಕಡಿಮೆ ಮತದಾನವಾದ ಪ್ರದೇಶಗಳನ್ನು ಗುರುತಿಸಿ, ಈ ಸ್ಥಳಗಳಲ್ಲಿ ಸ್ವೀಪ್ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಂಡು ಜಾಗೃತಿ ಮೂಡಿಸಲಾಗುತ್ತಿದೆ. ಮತದಾರರನ್ನು ಮತಗಟ್ಟೆಯತ್ತ ಆಕರ್ಷಿಸಿ ಹೆಚ್ಚಿನ ಮತದಾನಕ್ಕೆ ಕ್ರಮ ವಹಿಸಲಾಗುತ್ತಿದೆ. ನೋಟಾ ಮತಕ್ಕೆ ಅವಕಾಶ ಕಲ್ಪಿಸಲಾಗಿದೆ ಎಂದು ಹೇಳಿದರು.

ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಅವರು ಮಾತನಾಡಿ, ಜಿಲ್ಲೆಯಲ್ಲಿ ಲೋಕಸಭಾ ಚುನಾವಣೆ 2024ರ ಹಿನ್ನೆಲೆಯಲ್ಲಿ ಮೇ 07ರಂದು ಮತದಾನ ನಡೆಯಲಿದೆ. ಎಲ್ಲ ಕುಟುಂಬದವರು ಅರ್ಹ ಮತದಾರರೊಂದಿಗೆ ಮತಗಟ್ಟೆಗಳಿಗೆ ತೆರಳಿ ಮತದಾನ ಮಾಡುವಂತೆ ಮನವಿ ಮಾಡಿಕೊಂಡ ಅವರು, ಮತದಾನದ ಹಕ್ಕು ಅತ್ಯಂತ ಪವಿತ್ರ ಹಾಗೂ ಅಮೂಲ್ಯವಾದದ್ದು ಹಾಗೂ ಪವಿತ್ರವಾದದ್ದು, ಉತ್ತಮ ಸಮಾಜ, ಸುಭದ್ರ ದೇಶ ನಿರ್ಮಾಣದಲ್ಲಿ ಪ್ರತಿಯೊಬ್ಬರ ಮತ ಅತ್ಯಅಮೂಲ್ಯ ಹಾಗಾಗಿ ಯಾರೂ ಕೂಡ ನಿರ್ಲಕ್ಷ್ಯ ಭಾವನೆ ತೋರದೆ ಕಡ್ಡಾಯವಾಗಿ ಮತದಾನ ಮಾಡುವ ಮೂಲಕ ಮತದಾನದ ಮೌಲ್ಯವನ್ನು ಹೆಚ್ಚಿಸಬೇಕು ಎಂದು ಅವರು ಹೇಳಿದರು.

ಚುನಾವಣಾ ಆಯೋಗದ ನಿರ್ದೇಶನದಂತೆ ನಮ್ಮ ನಡೆ ಮತಗಟ್ಟೆ ಕಡೆ ಕಾರ್ಯಕ್ರಮ ಆಯೋಜಿಸಲಾಗಿದ್ದು, ಗ್ರಾಮ ಪಂಚಾಯತ್ ಸೇರಿದಂತೆ ನಗರ ಮಟ್ಟದಲ್ಲಿ ಮತದಾನ ಪ್ರಮಾಣ ಹೆಚ್ಚಿಸಲು ಸ್ವೀಪ್ ಸಮಿತಿ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಋಷಿಕೇಶ ಸೋನಾವಣೆ ಅವರು ಮಾತನಾಡಿ, ಜಗತ್ತಿನಲ್ಲಿಯೇ ಅತ್ಯಂತ ಶ್ರೇಷ್ಠ ಸಂವಿಧಾನ ಹೊಂದಿದ ದೇಶ ನಮ್ಮದು. ಇಂತಹ ದೇಶದದಲ್ಲಿ ಜನಿಸಿದ ಪ್ರತಿಯೊಬ್ಬ ನಾಗರಿಕನೂ ಪುಣ್ಯವಂತ. ಉತ್ತಮ ಪ್ರಜಾಪ್ರಭುತ್ವ ಹೊಂದಿರುವ ನಮ್ಮ ದೇಶದ ಪ್ರಜಾಪ್ರಭುತ್ವ ವ್ಯವಸ್ಥೆನ್ನು ಕಾಪಾಡಿಕೊಂಡು ಹೋಗುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಈ ಕರ್ತವ್ಯವನ್ನು ನಿಭಾಯಿಸಲು ಮತದಾನ ಅತ್ಯಂತ ಮಹತ್ವದ್ದಾಗಿದೆ. ಪ್ರತಿಯೊಬ್ಬರು ಮತದಾನ ಹಬ್ಬದಲ್ಲಿ ಸಕ್ರೀಯವಾಗಿ ಭಾಗವಹಿಸಿ, ಮತದಾನ ಮಾಡುವ ಮೂಲಕ ಪ್ರಜಾಪ್ರಭುತ್ವವನ್ನು ಗಟ್ಟಿಗೊಳಿಸಬೇಕು ಎಂದು ಹೇಳಿದ ಅವರು, ಯಾವುದೇ ಆಸೆ, ಆಮಿಷಗಳಿಗೆ ಬಲಿಯಾಗದೇ ಯೋಗ್ಯ ಅಭ್ಯರ್ಥಿಗಳ ಆಯ್ಕೆಗಾಗಿ ಕಡ್ಡಾಯವಾಗಿ ಮತ ಚಲಾಯಿಸುವಂತೆ ಅವರು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಮಹಾನಗರ ಪಾಲಿಕೆಯ ಉಪ ಆಯುಕ್ತರಾದ ಮಹಾವೀರ ಬೋರಣ್ಣವರ ರಚಿಸಿದ ಮತದಾರರ ಜಾಗೃತಿ ಗೀತೆಯನ್ನು ಜಿಲ್ಲಾ ಸ್ವೀಪ್ ಸಮಿತಿಯ ರಾಯಭಾರಿ ಸಾಕ್ಷಿ ಹಿರೇಮಠ ಹಾಡಿದರು. ಎಲ್ಲರೂ ಮತದಾನ ಜಾಗೃತಿ ಕುರಿತು ಘೋಷಣೆಗಳನ್ನು ಕೂಗಿದರು. ಮಹಾನಗರ ಪಾಲಿಕೆಯ ಉಪ ಆಯುಕ್ತರಾದ ಮಹಾವೀರ ಬೋರಣ್ಣವರ ಮತದಾರರ ಪ್ರತಿಜ್ಞಾ ವಿಧಿ ಬೋಧಿಸಿದರು. ಮತದಾನ ಜಾಗೃತಿ ಅಭಿಯಾನ ಅಂಗವಾಗಿ ಹಮ್ಮಿಕೊಂಡ ರಂಗೋಲಿ ಸ್ಪರ್ಧೆಯಲ್ಲಿ ವಿಜೇತರಾದ ಸ್ಪರ್ಧಾಳುಗಳಿಗೆ ಬಹುಮಾನ ಹಾಗೂ ಪ್ರಮಾಣ ಪತ್ರಗಳನ್ನು ವಿತರಿಸಲಾಯಿತು.

ಇದಕ್ಕೂ ಮೊದಲು ನಗರದ ಕಂದಗಲ್ ಹನುಮಂತರಾಯ ರಂಗಮಂದಿರದಿಂದ ಆರಂಭಗೊಂಡ ಮತದಾನ ಜಾಗೃತಿ ಜಾಥಾ ಅಭಿಯಾನಕ್ಕೆ ಜಿಲ್ಲಾಧಿಕಾರಿ ಟಿ.ಭೂಬಾಲನ್, ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ, ಮಹಾನಗರ ಪಾಲಿಕೆ ಆಯುಕ್ತ ಆಶಾದ ಉರ್ ರೆಹಮಾನ ಶರೀಫ್ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು. ಜಾಗೃತಿ ಜಾಥಾ ಅಭಿಯಾನವು ವಿವಿಧ ವಾದ್ಯ ಮೇಳದೊಂದಿಗೆ ದರಬಾರ ಶಿಕ್ಷಣ ಸಂಸ್ಥೆ ಆವರಣದರೆಗೆ ಸಾಗಿತು.

ಈ ಸಂದರ್ಭದಲ್ಲಿ ಚುನಾವಣಾ ವೀಕ್ಷಕರಾದ ಡಾ. ರತನ್ ಕನ್ವರ್ ಹೆಚ್. ಗಢವಿಚರಣ, ಜಿಲ್ಲಾ ಸ್ವೀಪ್ ಸಮಿತಿಯ ನೋಡಲ್ ಅಧಿಕಾರಿ ಸಿ ಆರ್ ಮುಂಡರಗಿ, ಉಪಕಾರ್ಯದರ್ಶಿ ಬಿ ಎಸ್ ಮೂಗನೂರಮಠ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಪ್ರೀತಮ್ ನಸಲಾಪುರ, ಜಿಲ್ಲಾ ಸ್ವೀಪ್ ಸಮಿತಿಯ ರಾಯಭಾರಿಗಳಾದ ರಾಜೇಶ್ ಪವಾರ, ಸಹನಾ ಕುಡಿಗನೂರ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ವಿವಿಧ ಕಾಲೇಜ್ ಹಾಗೂ ವಸತಿ ನಿಲಯದ ವಿದ್ಯಾರ್ಥಿಗಳು ಇತರರು ಇದ್ದರು.






# ನದಿಯಲ್ಲಿ ಬಿದ್ದು ಬಾಲಕ ಸಾವು

**ಉದಯರಶ್ಮಿ ನ್ಯೂಸ್**

ಆಲಮಟ್ಟಿ: ಕೃಷ್ಣಾ ನದಿಯಲ್ಲಿ ಸ್ನಾನಕ್ಕಿಳಿದಿದ್ದ ಬಾಲಕನೋರ್ವ ಕೃಷ್ಣೆಯ ಪಾಲಾದ ಘಟನೆ ಸೋಮವಾರ ತಾಲ್ಲೂಕಿನ ಯಲಗೂರ ಗ್ರಾಮದ ಜಾಕವೆಲ್ ಬಳಿ ಜರುಗಿದೆ.

ಮೃತ ಯುವಕ ಬಸವನಬಾಗೇವಾಡಿ ತಾಲ್ಲೂಕಿನ ಹಂಗರಗಿ ಗ್ರಾಮದ ವೆಂಕಟೇಶ ಶರಣಪ್ಪ ಚಲವಾದಿ(15) ಕಳೆದೆರೆಡು ದಿನಗಳಿಂದ ಆಲಮಟ್ಟಿಯ ಜಲಾಶಯದಿಂದ ಕೃಷ್ಣಾ ನದಿ ತಳಪಾತ್ರಕ್ಕೆ ನೀರು ಬಿಡಲಾಗುತ್ತಿದೆ. ಹೀಗಾಗಿ ಯಲಗೂರ ಜಾಕವೆಲ್ ಬಳಿ ನೀರಿನ ಹರಿವು ಇತ್ತು. ನೀರಿನ ಆಳ ಅಗಲದ ಮಾಹಿತಿ ಗೊತ್ತಿಲ್ಲದ್ದ ಬಾಲಕ ನದಿಯಲ್ಲಿ ಮುಳುಗಿದ ಎನ್ನಲಾಗಿದೆ.

ವಿಷಯ ತಿಳಿಯುತ್ತಿದ್ದಂತೆ ಸ್ಥಳಕ್ಕೆ ಭೇಟಿ ನೀಡಿದ ನಿಡಗುಂದಿ ಪೊಲೀಸರು, ಜಲಾಶಯದಿಂದ ನೀರು ಬಿಡುವುದನ್ನು ಕೆಲ ಕಾಲ ಬಂದ್ ಮಾಡಿಸಲಾಯಿತು. ಸ್ಥಳೀಯ ಮೀನುಗಾರರ ಜೊತೆಗೂಡಿ ಅಗ್ನಿಶಾಮಕ ದಳದ ತಂಡದವರು ಸೇರಿ ಶವ ಹುಡುಕಾಟದಲ್ಲಿ ತೊಡಗಿದ್ದರು. ಸಂಜೆಯವರೆಗೂ ಶವ ಪತ್ತೆಯಾಗಲಿಲ್ಲ.

ಶುಕ್ರವಾರ ಮೃತನ ಚಿಕ್ಕಪ್ಪ ಅವರ ಮದುವೆಯಾಗಿದ್ದು, ಅದರ ಬಾಸಿಂಗ್ ಬಿಡಲು ನದಿಗೆ ಬಂದಾಗ ಈ ದುರ್ಘಟನೆ ಜರುಗಿದೆ.

ನದಿ ತೀರದಲ್ಲಿ ಸಂಬಂಧಿಗಳ ರೋಧನ ಮುಗಿಲುಮುಟ್ಟಿತ್ತು. ನಿಡಗುಂದಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಫರ್ರೆ ಹಿಂದಿ ಚಲನಚಿತ್ರ ಮತ್ತು ಯುವ ಜನತೆ

**ಉದಯರಶ್ಮಿ ದಿನಪತ್ರಿಕೆ**

**ವೀಣಾಂತರಂಗ**



-ವೀಣಾ ಎಚ್. ಪಾಟೀಲ್, ಮುಂಡರಗಿ

ಅನಾಥಾಲಯವೊಂದರಲ್ಲಿ ಓದುತ್ತಿರುವ ನಿಯತಿ ಅತ್ಯಂತ ಪ್ರತಿಭಾವಂತ ವಿದ್ಯಾರ್ಥಿನಿ, ಹತ್ತನೇ ತರಗತಿಯಲ್ಲಿ ಅತಿ ಹೆಚ್ಚು ಅಂಕಗಳನ್ನು ಗಳಿಸಿ ಇಡೀ ದೇಶಕ್ಕೆ ಮೊದಲಿಗಳಾಗಿ ನಗರದ ಅತ್ಯಂತ ಪ್ರತಿಷ್ಠಿತ ಶಾಲೆಗೆ ಆಯ್ಕೆಯಾದಳು. ವಿದೇಶಿ ಕಾರುಗಳಲ್ಲಿ ಆ ಶಾಲೆಗೆ ಬರುತ್ತಿದ್ದ ಇತರ ವಿದ್ಯಾರ್ಥಿಗಳು ಈಕೆಯ ಬುದ್ಧಿಮತ್ತೆಯನ್ನು ಕಂಡು ವಿಸ್ಮಿತರಾದರು. ಈಕೆಯ ಜೊತೆಗೆ ಆಕೆಯ ಇನ್ನೊರ್ವ ಸ್ನೇಹಿತ ಆಕಾಶ್ ಕೂಡ ಅದೇ ಶಾಲೆಗೆ ಆಯ್ಕೆಯಾಗಿದ್ದ.


ಮೊದಲ ತರಗತಿಯಲ್ಲಿಯೇ ಚವಿ ಎಂಬ ಶ್ರೀಮಂತ ಹುಡುಗಿಗೆ ಲೆಕ್ಕವನ್ನು ಬಿಡಿಸಲು ಸಹಾಯ ಮಾಡಿದ ನಿಯತಿಯನ್ನು ತನ್ನ ಮನೆಗೆ ಕರೆದೊಯ್ದ ಚವಿ ತನಗೆ ಓದಿನಲ್ಲಿ ಸಹಾಯ ಮಾಡಲು ಕೇಳುತ್ತಾಳೆ. ಕನಿಷ್ಠ 80 ಪರ್ಸೆಂಟ್ ಅಂಕಗಳನ್ನು ಪಡೆದು ವಿದೇಶದಲ್ಲಿ ವಿದ್ಯಾಭ್ಯಾಸ ಪಡೆಯುವ ಮಹತ್ವಕಾಂಕ್ಷೆ ಆಕೆ ಮತ್ತು ಆಕೆಯ ತಂದೆಯದ್ದು. ಪರೀಕ್ಷೆಗಳಲ್ಲಿ ನಿಯತಿ ಆಕೆಗೆ ಸಹಾಯ ಮಾಡುವ ಮೂಲಕ ಆಕೆ 91 ಶೇಕಡ ಅಂಕಗಳನ್ನು ಗಳಿಸುತ್ತಾಳೆ. ಮೊದಮೊದಲು ಸಣ್ಣಪುಟ್ಟ ಅವಶ್ಯಕತೆಗಳಿಗೆ ಅನಾಥಾಲಯದ ಮಕ್ಕಳ ಜೊತೆ ಪಾರ್ಟಿ ಮಾಡಲು ದುಡ್ಡಿಗಾಗಿ ಒಂದಿಬ್ಬರಿಗೆ ಪರೀಕ್ಷೆಗಳಲ್ಲಿ ಈ ರೀತಿಯ ಸಹಾಯ ಮಾಡಿದ್ದಳು ನಿಯತಿ. ಇದೀಗ ಸ್ನೇಹವನ್ನು ಉಳಿಸಿಕೊಳ್ಳಲು ಭಿಡೆಗೆ ಬಿದ್ದು ಆಕೆ ಚವಿಗೆ ಸಹಾಯ ಮಾಡಿರುತ್ತಾಳೆ ಚವಿ. ಮತ್ತು ಆಕೆಯ ಸ್ನೇಹಿತರು ನಿಯತಿಗೆ ಧನ ಸಹಾಯ ಮಾಡುತ್ತಾರೆ.

ಇತ್ತ ಹೆಚ್ಚಿನ ಅಂಕಗಳನ್ನು ಗಳಿಸಿದ ಆಕಾಶ ಮತ್ತು ನಿಯತಿ ಇಬ್ಬರಿಗೂ ಶಾಲೆಯ ಪ್ರಿನ್ಸಿಪಾಲ್ ಕರೆದು ಆಕ್ಸ ಫರ್ಡ್ ಯುನಿವರ್ಸಿಟಿಯ ಸ್ಕಾಲರ್ಶಿಪ್ ಪರೀಕ್ಷೆಗೆ ತಯಾರಾಗಲು ಹೇಳುತ್ತಾರೆ.

25 ಜನ ಮಕ್ಕಳ ಬದಲಾಗಿ 50 ಮಕ್ಕಳನ್ನು ಅನಾಥಾಶ್ರಮದಲ್ಲಿ ಇಟ್ಟುಕೊಂಡಿದ್ದ ಅನಾಥಾಶ್ರಮದ ದಂಪತಿಗಳಿಗೆ ಉಂಟಾದ ಹಣಕಾಸಿನ ಬಿಕ್ಕಟ್ಟನ್ನು ನಿವಾರಿಸಲು ನಿಯತಿಯು ಚವಿ ಮತ್ತು ಆಕೆಯ ಸ್ನೇಹಿತರಿಗೆ ಸಹಾಯ ಮಾಡುವುದಾಗಿ ಒಪ್ಪಿಕೊಂಡಳು.



ಎರಡನೇ ಮತ್ತು ಮೂರನೇ ಟರ್ಮ್ ನ ಪರೀಕ್ಷೆಗಳಲ್ಲಿ ಸಹಾಯ ಮಾಡಿದಳು. ಆದರೆ ಚಿಕ್ಕಂದಿನಿಂದ ಜವಿ ಮತ್ತು ಆಕೆಯ ಸ್ನೇಹಿತರ ಶೈಕ್ಷಣಿಕ ಪ್ರಗತಿಯನ್ನು ಬಲ್ಲ ಶಿಕ್ಷಕರು ಕೊಂಚ ಅನುಮಾನಗೊಂಡು ಮೂರನೇ ಬಾರಿ ಎರಡೆರಡು ಸೆಟ್ ಪ್ರಶ್ನೆ ಪತ್ರಿಕೆಗಳನ್ನು ನೀಡಿದರು. ತನ್ನ ಪ್ರಶ್ನೆಪತ್ರಿಕೆಯನ್ನು ಪೂರೈಸಿದ ನಿಯತಿ ಶಿಕ್ಷಕರ ಕಣ್ತಪ್ಪಿಸಿ ಕವಿಯ ಪ್ರಶ್ನೆ ಪತ್ರಿಕೆಯನ್ನು ಬಿಡಿಸುತ್ತಾಳೆ. ಇದು ಆಕಾಶ್ನ ಗಮನಕ್ಕೆ ಬಂದು ಆತ ಪ್ರಿನ್ಸಿಪಾಲರಿಗೆ ಈ ವಿಷಯದ ಕುರಿತು ದೂರು ನೀಡುತ್ತಾನೆ. ಆಕೆ ಓದುತ್ತಿದ್ದ ಕಾಲೇಜಿನ ಪ್ರಿನ್ಸಿಪಾಲ್ ಆಕೆಗೆ ಆಕ್ಸರ್ಡ್ ಗೆ ಹೋಗುವ ಪ್ರವೇಶ ಪರೀಕ್ಷೆ ಬರೆಯಲು ಇದ್ದ ಅವಕಾಶವನ್ನು ನಿರಾಕರಿಸುವ ಮೂಲಕ ಆಕೆಯನ್ನು ಶಿಕ್ಷೆ ವಿಧಿಸುತ್ತಾರೆ. ಈ ವಿದ್ಯಮಾನಗಳಿಂದ ಆಕೆಯನ್ನು ಸಾಕುತ್ತಿದ್ದ ಅನಾಥಾಶ್ರಮದ ಮಾಲೀಕರು ಕೋಪಗೊಂಡರಲ್ಲದೇ ಮುಂದೆ ಈ ರೀತಿಯ ತಪ್ಪೆಸಗದಂತೆ ತಾಕೀತು ಮಾಡಿದರು.



ಪ್ರಿನ್ಸಟನ್ ಕಾಲೇಜಿನ ಆಕೆಯ ಸ್ನೇಹಿತರೆಲ್ಲ ಸೇರಿ ನಿಯತಿ ಮತ್ತು ಆಕಾಶಗೆ ವಿದೇಶದಲ್ಲಿ ಪರೀಕ್ಷೆ ಬರೆಯಲು ತಾವು ಹಣ ಸಹಾಯ ಮಾಡುವುದಾಗಿಯೂ ಬದಲಾಗಿ ತಮ್ಮ ಪರೀಕ್ಷೆಗೆ ಸಹಾಯ ಮಾಡಲು ಕೇಳಿಕೊಂಡರು. ಈಗಾಗಲೇ ಇವರ ಕೃತಕ ಜಾಲದಲ್ಲಿ ಆಕಾಶ್ ಕೂಡ ಸಿಕ್ಕಿಬಿದ್ದು ಪರೀಕ್ಷೆ ಬರೆಯಲಾಗದೆ ಹೋಗಿದ್ದ. ಬೇರೆ ಬೇರೆ ದೇಶಗಳಲ್ಲಿ ವಿಭಿನ್ನ ಕಾಲಾವಧಿ ಇರುವುದನ್ನು ತಮಗೆ ಅನುಕೂಲಕರವಾಗಿ ಭಾವಿಸಿ ಆಕಾಶ್ ಮತ್ತು ನಿಯತಿ ಆಸ್ಟ್ರೇಲಿಯಾದಲ್ಲಿ ಪರೀಕ್ಷೆ ಬರೆದರು. ಒಟ್ಟು ಮೂರು ಪರೀಕ್ಷೆಗಳನ್ನು ಬರೆಯಬೇಕಾದ ಆ ಸಂದರ್ಭದಲ್ಲಿ ಪರೀಕ್ಷಾ ಹಾಲ್ ಪ್ರವೇಶಿಸುವ ಮುನ್ನ ಅಲ್ಲಿಯೇ ಇದ್ದ ಟಾಯ್ಲೆಟ್ನೊಳಗೆ ತಮ್ಮ ಮೊಬೈಲ್ ಫೋನನ್ನು ಬಚ್ಚಿಟ್ಟು ತಮ್ಮ ಪರೀಕ್ಷೆ ಬರೆದು ಪೂರೈಸಿದ ಕೂಡಲೇ ಓಡುತ್ತಾ ಮತ್ತೆ ಟಾಯ್ಲೆಟ್ ಗೆ ಬಂದು ತಾವು ಬರೆದ ಉತ್ತರಗಳನ್ನು ಸಾಂಕೇತಿಕವಾಗಿ ಹಾಕಲು ಪ್ರಯತ್ನಿಸಿದರು. ಆದರೆ ಇವರ ಚರ್ಯೆಯಿಂದ ಅನುಮಾನಗೊಂಡ ಪರೀಕ್ಷಾ ಹಾಲ್ ನ ಮೇಲ್ವಿಚಾರಕರು ಆಕಾಶ್ ನನ್ನು ತಮ್ಮ ಕಸ್ಟಡಿಗೆ ತೆಗೆದುಕೊಂಡು ಮರುದಿನ ಬಿಡುಗಡೆ ಮಾಡಿದರೆ, ನಿಯತಿಯನ್ನು ಸಂಪೂರ್ಣ ನಗ್ನಗೊಳಿಸಿ ಪರೀಕ್ಷೆ ಮಾಡಿದರು. ಇದರಿಂದ ಮಾನಸಿಕವಾಗಿ ಅತ್ಯಂತ ಕುಸಿದು ಹೋದ ನಿಯತಿ ಮರಳಿ ಭಾರತಕ್ಕೆ ಬಂದಳು. ಆಕೆಯನ್ನು ಅದೆಷ್ಟೇ ಚವಿ ಮತ್ತು ಸ್ನೇಹಿತರು ಮಾತನಾಡಿಸಲು ಬಂದರೂ ನಿಯತಿ ಅವರತ್ತ ತಿರುಗಿಯೂ ನೋಡದೆ ಅನಾಥಾಶ್ರಮವನ್ನು ಸೇರಿದಳು. ಏನೊಂದೂ ಮಾತನಾಡದೆ ಮೌನವಾಗುಳಿದ ನಿಯತಿ ಆಕ್ಸರ್ಡ್ ಯುನಿವರ್ಸಿಟಿಯಲ್ಲಿ ಕಲಿಯಲು ಆಯ್ಕೆಯಾದ ಪತ್ರ ಇಡೀ ಅನಾಥಾಶ್ರಮದ ಮಕ್ಕಳಲ್ಲಿ ಸಂತಸದ ಕಲರವವನ್ನು ಎಬ್ಬಿಸಿತು.




ಇನ್ನೇನು ಕೆಲವೇ ದಿನಗಳಲ್ಲಿ ಓದಲು ವಿದೇಶಕ್ಕೆ ಹಾರಲಿದ್ದ ನಿಯತಿ ತನ್ನನ್ನು ಸಾಕಿದ ಅನಾಥಾಶ್ರಮದ ಪಾಲಕರ ಮುಂದೆ ತಾನು ಮಾಡಿದ ತಪ್ಪನ್ನು ಮತ್ತು ಅದು ತನ್ನ ಮೇಲೆ ಬೀರಿದ ಪರಿಣಾಮವನ್ನು ಹೇಳಿ ಕ್ಷಮೆ ಕೇಳಿದಳು. ಇನ್ನು ಮುಂದೆ ಹೀಗಾಗದಂತೆ ತನ್ನನ್ನು ತಾನು ಸಂಭಾಳಿಸಿಕೊಳ್ಳುವ ಭರವಸೆಯನ್ನು ನೀಡಿದಳು. ಆಕೆಯನ್ನು ಬಹುವಾಗಿ ಪ್ರೀತಿಸುತ್ತಿದ್ದ ಅನಾಥಾಶ್ರಮದ ಪಾಲಕರು ಆಕೆಯನ್ನು ತಬ್ಬಿಕೊಂಡು ಸಮಾಧಾನ ಮಾಡಿದರು. ಅದಾದ ಒಂದೆರಡು ದಿನಗಳಲ್ಲಿ ಸ್ನೇಹಿತ ಆಕಾಶ್ ಆಕೆಯನ್ನು ಬಂದು ಭೇಟಿಯಾಗಿ ತಾನು ಮಾಡಿದ ತಪ್ಪಿನ ಅರಿವು ತನಗೆ ಆಗಿರುವುದಾಗಿಯೂ ಇನ್ನು ಮುಂದೆ ಹಾಗೆ ಮಾಡುವುದಿಲ್ಲ,ಮುಂದಿನ ವರ್ಷ ಮತ್ತೊಮ್ಮೆ ಪ್ರಯತ್ನಿಸುವುದಾಗಿ ಹೇಳಿದನು. ನಂತರ ತನ್ನ ಓದನ್ನು ಮುಂದುವರಿಸಲು ಪಾಲಕರನ್ನು ಬೀಳ್ಕೊಂಡ ನಿಯತಿ ವಿದೇಶಕ್ಕೆ ಪ್ರಯಾಣ ಬೆಳೆಸಿದಳು.

ಇದು ನಾನು ಇತ್ತೀಚೆಗೆ ನೋಡಿದ ಫರ್ರೆ ಎಂಬ ಚಲನಚಿತ್ರದ ಕಥೆ.... ಫರ್ರೇ ಎಂದರೆ ಕಾಪಿ ಚೀಟಿ ಎಂದರ್ಥ. ಕ್ಷಣಿಕ ಆಸೆಗೆ ಬಲಿಯಾಗಿ ಪ್ರತಿಭಾವಂತ ಮಕ್ಕಳು ಶ್ರೀಮಂತ ಮಕ್ಕಳ ಜಾಲದಲ್ಲಿ ಸಿಲುಕಿದಾಗ ಅನುಭವಿಸುವ ತಾತ್ಕಾಲಿಕ ಸಂತೋಷಗಳನ್ನು ಬಹಳಷ್ಟು ತೊಂದರೆಗಳನ್ನು, ಈ ಚಲನಚಿತ್ರ ಕಣ್ಣಿಗೆ ಕಟ್ಟುವ ಹಾಗೆ ತೋರಿದೆ.

ತಪ್ಪು ಮಾಡೋದು ಸಹಜವಾದರೂ, ತಿದ್ದಿ ನಡೆಯುವುದು ಮನುಷ್ಯನ ಲಕ್ಷಣ. ಹದಿಹರೆಯದ ಹುಮ್ಮಸ್ಸಿನಲ್ಲಿ, ಇಲ್ಲಸಲ್ಲದ ತಪ್ಪುಗಳಿಗೆ ಕೈ ಹಾಕಿದಾಗ ಬದುಕು ಪಡೆದುಕೊಳ್ಳುವ ಅನಾಹುತಕಾರಿ ತಿರುವುಗಳು ನಮ್ಮನ್ನು ಶಾಶ್ವತವಾಗಿ ನಮ್ಮ ಗುರಿಯಿಂದ ವಿಮುಖಗೊಳಿಸಬಹುದು. ಎಲ್ಲರೂ ನಿಯತಿಯಷ್ಟು ಅದೃಷ್ಟವಂತರಾಗಿರುವುದಿಲ್ಲ. ಈ ನಿಷ್ಠುರ ಸತ್ಯ 'ಫರ್ರೆ' ಎಂಬ ಹಿಂದಿ ಚಲನಚಿತ್ರದಲ್ಲಿ ಅನಾವರಣಗೊಂಡಿದೆ.

## ದಲಿತರು ಶಿಕ್ಷಣವಂತರಾಗಿ, ಸಮಗ್ರ ಅಭಿವೃದ್ಧಿಯಾಗಬೇಕು :ಹೆಬ್ಬಾಳ



ಉದಯರಶ್ಮಿ ನ್ಯೂಸ್

ಆಲಮಟ್ಟಿ: ಡಾ.ಅಂಬೇಡ್ಕರ ಅವರು ಹಲವು ಇಲ್ಲಗಳ ಕಾಲಘಟ್ಟದಲ್ಲಿ, ಅನೇಕ ಸಾಮಾಜಿಕ ಬಹಿಷ್ಕಾರದಂತಹ ಪರಿಸ್ಥಿತಿಗಳಲ್ಲಿ ಡಾ ಅಂಬೇಡ್ಕರ ಬೆಳೆಯಲು ಶಿಕ್ಷಣವೇ ಮುಖ್ಯ ಕಾರಣ. ಈಗ ಶಿಕ್ಷಣ ಪಡೆಯಲು ಸಾಕಷ್ಟು ಅವಕಾಶಗಳಿವೆ, ಹೀಗಾಗಿ ದಲಿತರು ಶಿಕ್ಷಣವಂತರಾಗಿ, ಸಮಗ್ರ ಅಭಿವೃದ್ಧಿಯಾಗಬೇಕು ಎಂದು ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಹಾಗೂ ಅಂಬೇಡ್ಕರ ಸೈನ್ಯದ ರಾಜ್ಯ ಸಂಘಟನಾ ಸಂಚಾಲಕ ಹಾಗೂ ವಿಜಯಪುರ ಜಿಲ್ಲಾ ಘಟಕದ ಸಂಚಾಲಕ ಮರೆಪ್ಪ ಹೆಬ್ಬಾಳ ಅಭಿಪ್ರಾಯಪಟ್ಟರು.

ಇಲ್ಲಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಭಾನುವಾರ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಹಾಗೂ ಅಂಬೇಡ್ಕರ ಸೈನ್ಯದ ವತಿಯಿಂದ ಡಾ ಅಂಬೇಡ್ಕರ ಅವರ 133 ನೇ ಜಯಂತಿ ಅಂಗವಾಗಿ ನಡೆದ, ಪ್ರಜಾಪ್ರಭುತ್ವ ರಕ್ಷಣೆಗಾಗಿ ತಾಲ್ಲೂಕು ಮಟ್ಟದ ಜನಜಾಗೃತಿ ಸಮಾವೇಶ ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯ ಘಟಕದ ಪ್ರಧಾನ ಕಾರ್ಯದರ್ಶಿ ಉಮೇಶ ಅಲಕಪುರ ಮಾತನಾಡಿ, ದಲಿತರು ಮೂಡನಂಬಿಕೆಗೆ ಹಾಗೂ ಆಮಿಷಕ್ಕೆ ಒಳಪಟ್ಟು ದೇವರುಗಳ ಹೆಸರಲ್ಲಿ ಕುರಿ, ಕೋಳಿ, ಕೋಣ ಬಲಿ ಕೊಡುವುದು, ದೇವದಾಸಿಯಂತಹ ಅನಿಷ್ಠ ಪದ್ಧತಿಯನ್ನು ತೊಡೆದು ಹಾಕಿ ದಲಿತರು ಮುಂದೆಬರಬೇಕು ಎಂದರು.

ತತ್ವಶಾಸ್ತ್ರದ ನಿವೃತ್ತ ಪ್ರಾಧ್ಯಾಪಕ ಡಾ ವೀರೇಶ್ವರ ಕುಂಬಾರ ಮಾತನಾಡಿ, ಡಾ ಅಂಬೇಡ್ಕರ್, ಶೋಷಿತ, ದಮನಿತರ, ಕಾರ್ಮಿಕರ, ಮಹಿಳೆ, ರೈತರ ಹಿತವನ್ನು ಕಾಪಾಡುವ ಕೆಲಸ ಮಾಡಿದ್ದಾರೆ, ಅವರ ಅಪಾರ ಶ್ರಮ, ಸಂವಿಧಾನ ರಚನೆಯಲ್ಲಿನ ಬದ್ಧತೆಯಿಂದಾಗಿ ಇಂದು ನಾವು ಚೆನ್ನಾಗಿದ್ದೇವೆ ಎಂದರು.

ಸಂಘಟನೆಯ ರಾಜ್ಯ ಘಟಕದ ಕಾರ್ಯಾಧ್ಯಕ್ಷ ನ್ಯಾಯವಾದಿ ಪ್ರಕಾಶ ದೊಡಮನಿ, ರಾಜ್ಯ ಸಂಘಟನಾ ಸಂಚಾಲಕ ಮಲ್ಲು ಬಿಜ್ಜೂರ, ಜ್ಯೋತಿ ಹಣಮಂತ ಹೆಬ್ಬಾಳ ಮಾತನಾಡಿ, ದಲಿತರು ಪ್ರಜ್ಞಾವಂತ ಮನೋಭಾವದವರಾಗಿರಬೇಕು ಎಂದರು.

ಬಾಗಲಕೋಟೆ ಜಿಲ್ಲಾ ಘಟಕದ ಸಂಚಾಲಕ ಹಣಮಂತ ಹಿರೇಮಳಗಾವಿ, ನಿಡಗುಂದಿ ತಾಲ್ಲೂಕು ಘಟಕದ ಸಂಚಾಲಕ ಹಣಮಂತ ಮುದ್ದಾಪುರ, ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಸುನಿತಾ ಹೆಬ್ಬಾಳ, ರಸೂಲಬಿ ನದಾಫ್, ಮಲ್ಲಪ್ಪ ಹೆಬ್ಬಾಳ, ಯಲ್ಲವ್ವ ಮಾದರ, ಹಣಮವ್ವ ಗಂಟಿ ಸೇರಿದಂತೆ ಹಲವರು ಇದ್ದರು.

### ಕಾಂಗ್ರೆಸ್ ಅಭ್ಯರ್ಥಿ ಪ್ರೊ.ರಾಜು ಆಲಗೂರ ಪರ ಪ್ರಚಾರ ಸಭೆಯಲ್ಲಿ ಸಚಿವ ಎಂ.ಬಿ.ಪಾಟೀಲ ವಾಗ್ದಾಳಿ

# ಎಲೆಕ್ಟ್ರಾಲ್ ಬಾಂಡ್ ಪ್ರಕರಣದಲ್ಲಿ ಕಳಚಿ ಬಿದ್ದ ಮೋದಿ ಮುಖವಾಡ



ಉದಯರಶ್ಮಿ ನ್ಯೂಸ್

ವಿಜಯಪುರ: ಚುನಾವಣೆಯಲ್ಲಿ ಪ್ರಸ್ತಾಪಿಸಲು ಅಭಿವೃದ್ಧಿ ವಿಚಾರಗಳಿಲ್ಲದ ಕಾರಣ ಪ್ರಧಾನಿ ನರೇಂದ್ರ ಮೋದಿ ಗಾಬರಿಯಾಗಿದ್ದು, ಮಾತಿನಲ್ಲಿಯೇ ಮೋಡಿ ಮಾಡುವ ಅವರ ಪ್ರಯತ್ನ ಯಶಸ್ವಿಯಾಗುವುದಿಲ್ಲ ಎಂದು ಕೈಗಾರಿಕೆ, ಮೂಲಸೌಲಭ್ಯ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ.

ಸೋಮವಾರ ತಿಕೋಟಾ ತಾಲೂಕಿನ ಬರಟಗಿ ಮತ್ತು ಹಂಚನಾಳ ಪಿ. ಎಚ್. ಗ್ರಾಮದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪ್ರೊ. ರಾಜು ಆಲಗೂರ ಪರ ಪ್ರಚಾರ ಕೈಗೊಂಡು ಅವರು ಮಾತನಾಡಿದರು.

ದೊಡ್ಡ ಇತಿಹಾಸ ಹೊಂದಿರುವ ಕಾಂಗ್ರೆಸ್ ದೇಶಕ್ಕೆ ಸ್ವಾತಂತ್ರ್ಯ ತಂದು ಕೊಟ್ಟಿದೆ. ಸ್ವಾತಂತ್ರ್ಯ ನಂತರದಲ್ಲಿ ಹಸಿರು, ಕೈಗಾರಿಕೆ, ಕ್ಷೀರ, ಶಿಕ್ಷಣ, ಔದ್ಯೋಗಿಕ ಕ್ರಾಂತಿ ಮೂಲಕ ಭಾರತೀಯರು ಬದುಕು ಕಟ್ಟಿಕೊಳ್ಳುವ ಕೆಲಸ ಮಾಡಿದೆ. ಆದರೆ, ಕಾಂಗ್ರೆಸ್ ಏನೂ ಮಾಡಿಲ್ಲ ಎಂದು ಹೇಳುವ ಬಿಜೆಪಿಯವರು ತಾವು ಏನು ಮಾಡಿದ್ದಾರೆ ಎಂಬುದನ್ನು ಹೇಳಲಿ. ಸ್ವಾತಂತ್ರ್ಯ ಸಂದರ್ಭದಲ್ಲಿ ನಾವು ಆಹಾರ ಧಾನ್ಯಗಳನ್ನು ಆಮದು ಮಾಡಿಕೊಳ್ಳುತ್ತಿದ್ದೇವು. ಆದರೆ, ಅಂದಿನ ಪ್ರಧಾನಿ ಜವಾಹರಲಾಲ ನೆಹರು ಮತ್ತು ಲಾಲಬಹಾದ್ದೂರ ಶಾಸ್ತ್ರಿ ಅವರು ಹಸಿರು ಕ್ರಾಂತಿಯ ಮೂಲಕ ಹಸಿವು ನೀಗಿಸಿ ಆಮದಿಗಿಂತ ಎರಡು ಪಟ್ಟು ಹೆಚ್ಚು ಆಹಾರ ಧಾನ್ಯಗಳನ್ನು ರಫ್ತು ಮಾಡಲು ಕ್ರಮ ಕೈಗೊಂಡರು. ಇಂದಿರಾ ಗಾಂಧಿ ಮತ್ತು ರಾಜೀವ ಗಾಂಧಿ ಅವರು ನೀರಾವರಿ, ಶಿಕ್ಷಣ, ಸಂವಹನ, ಸಂಪರ್ಕ ಕ್ರಾಂತಿ ಮಾಡಿದರು. ಈ ಮೂಲಕ ಬಡಜನರ ಬದುಕನ್ನು ಹಸನು ಮಾಡಿ ಸ್ವಾವಲಂಬಿಯಾಗಿ ಬದುಕಲು ನೆರವಾದರು ಎಂದು ಅವರು ಹೇಳಿದರು.

ಆದರೆ, ಕಳೆದ 10 ವರ್ಷಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಬೆಲೆ ಏರಿಕೆ, ಉದ್ಯೋಗ ಕಡಿತ, ಜಿ.ಎಸ್.ಟಿ ಹೆಸರಿನಲ್ಲಿ ರೈತರು, ಜನಸಾಮಾನ್ಯರಿಗೆ ಹೊರೆಯಾಗುವಂಥ ದೊಡ್ಡ ಕೊಡುಗೆಗಳನ್ನು ನೀಡಿದ್ದಾರೆ. ಅಲ್ಲದೇ, ವಿಜಯಪುರ ಸಂಸದ ರಮೇಶ ಜಿಗಜಿಣಗಿ ಕಳೆದ 15 ವರ್ಷಗಳಿಂದ ಜಿಲ್ಲೆಯ ಸಂಸದರಾಗಿದ್ದರೂ ಯಾವುದೇ ಅಭಿವೃದ್ಧಿ ಮಾಡಿಲ್ಲ. ಜನರಿಗೆ ಹೊರೆಯಾಗಿರುವ ಕೇಂದ್ರ ಸರಕಾರ ಮತ್ತು ಸಂಸದರಿಗೆ ತಕ್ಕ ಉತ್ತರ ನೀಡಲು ಕಾಂಗ್ರೆಸ್ ಅಭ್ಯರ್ಥಿ ಪ್ರೊ. ರಾಜು ಆಲಗೂರ ಅವರಿಗೆ ಮತ ಹಾಕಿ ಗೆಲ್ಲಿಸುವ ಮೂಲಕ ನಮ್ಮೆಲ್ಲರ ಕೈ ಬಲಪಡಿಸಬೇಕು ಎಂದು ಅವರು ಮನವಿ ಮಾಡಿದರು.

ಎಲೆಕ್ಟ್ರಾಲ್ ಬಾಂಡ್ ಪ್ರಕರಣದಲ್ಲಿ ಮೋದಿ ಪ್ರಾಮಾಣಿಕತೆ ಬಯಲಾಗಿದೆ. ಸುಪ್ರೀಂ ಕೋರ್ಟ್ ನ್ಯಾಯಮೂರ್ತಿಗಳ ಸೂಚನೆ ಹಿನ್ನೆಲೆ ಎಲೆಕ್ಟ್ರಾಲ್ ಬಾಂಡ್ ಪ್ರಕರಣದಲ್ಲಿ ಪ್ರದಾನಿ ಮುಖವಾಡ ಕಳಚಿ ಬಿದ್ದಿದೆ. ಅವರ ನಿಜಬಣ್ಣ ಬಯಲಾಗಿದೆ. ಈ ಬಗ್ಗೆ ಸಂಪೂರ್ಣ ತನಿಖೆಯಾಗಬೇಕಿದೆ. ಅಭಿವೃದ್ಧಿ ಮಾಡದ ಬಿಜೆಪಿ ಮತ ಗಿಟ್ಟಿಸಲು ಕೋಮುಭಾವನೆ ಕೆರಳಿಸುವುದನ್ನು ಬಿಟ್ಟು ಬೇರೇನೂ ಮಾಡುತ್ತಿಲ್ಲ ಎಂದು ಅವರು ಹೇಳಿದರು.

ಬರಟಗಿ ಮುಖಂಡ ಸಂಗಮೇಶ ದಾಶ್ಯಾಳ ಮತ್ತು ಪೋಮಸಿಂಗ್ ರಾಠೋಡ ಮಾತನಾಡಿ, ಎಂ. ಬಿ. ಪಾಟೀಲರು ಬರಪೀಡಿತ ವಿಜಯಪುರ ಜಿಲ್ಲೆಯನ್ನು ಮಲೆನಾಡನ್ನಾಗಿ ಮಾಡುತ್ತಿದ್ದಾರೆ. ಬರಟಗಿ ಗ್ರಾಮದ ಇಂಚಿಂಚೂ ಕಬ್ಬು ಬೆಳೆಯಲಾಗುತ್ತಿದ್ದು, ನಮ್ಮೆಲ್ಲರ ಮುಖಗಳಲ್ಲಿ ಮಂದಹಾಸ ಮೂಡಲು ಕಾರಣರಾಗಿದ್ದಾರೆ. ಯಾವುದೇ ಅಭಿವೃದ್ಧಿ ಕೆಲಸ ಮಾಡದ ಬಿಜೆಪಿಗೆ ತಕ್ಕ ಪಾಠ ಕಲಿಸಲು ಮತ್ತು ಪ್ರೊ. ರಾಜು ಆಲಗೂರ ಅವರಿಗೆ ಮತ ಹಾಕಿ ಎಂ. ಬಿ. ಪಾಟೀಲ ಅವರ ಕೈ ಬಲಪಡಿಸಲು ಎಲ್ಲರೂ ಕಾಂಗ್ರೆಸ್ಸಿಗೆ ಮತ ಹಾಕಿ ಗೆಲ್ಲಿಸಬೇಕು ಎಂದು ಹೇಳಿದರು.

ಹಂಚನಾಳ ಪಿ. ಎಚ್. ಗ್ರಾಮದ ಮುಖಂಡರಾದ ಶ್ರೀಕಾಂತ ಬಿರಾದಾರ, ಸೋಮು ಚವ್ಹಾಣ ಮತ್ತು ರೇವಣಸಿದ್ಧ ತಮಗೊಂಡ ಮಾತನಾಡಿ, ನಾವೆಲ್ಲರೂ ಸಚಿವ ಎಂ. ಬಿ. ಪಾಟೀಲ ಅಭಿಮಾನಿಯಾಗಿದ್ದೇವೆ. ಮನೆ ನಡೆಸುವುದೂ ಕಷ್ಟವಾಗಿದ್ದ ಸಮಯದಲ್ಲಿ ಬಡವರ ಪಾಲಿಗೆ ರಾಜ್ಯ ಸರಕಾರದ ಪಂಚ ಗ್ಯಾರಂಟಿ ಯೋಜನೆಗಳು ವರದಾನವಾಗಿದ್ದು, ಜೀವನ ಸಾಗಿಸಲು ಅನುಕೂಲ ಕಲ್ಪಿಸಿವೆ. ನಾವೆಲ್ಲ ಕಾಂಗ್ರೆಸ್ ಪರವಾಗಿದ್ದೇವೆ. ಲೀಡ್ ಕೊಡಲಿದ್ದೇವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮುಖಂಡರಾದ ಕವಿತಾ ರಜಪೂತ, ಬಾಳುಗೌಡ ಪಾಟೀಲ, ಬಸುಗೌಡ ಪಾಟೀಲ, ಸಿದ್ದನಗೌಡ ಪಾಟೀಲ, ಪದ್ದು ಚವ್ಹಾಣ, ಸಿದ್ದು ಸಜ್ಜನ, ಕಲ್ಲಪ್ಪ ಪವಾರ, ಮೋತಿಲಾಲ ನಾಯಕ, ರಾಜು ರಾಠೋಡ, ವಿಜಯ ರಜಪೂತ, ಗೋವಿಂದ ಶಿಂಧೆ, ಸತೀಶ ನಾಯಕ, ಅಶೋಕ ಪಾಟೀಲ, ಬಾಳಪ್ಪ ಹಚಡದ, ಸುಭಾಷ ರಜಪೂತ, ಶ್ರೀಶೈಲ ಪಾಟೀಲ, ಸದಾಶಿವ ಪೂಜಾರಿ ಮುಂತಾದವರು ಉಪಸ್ಥಿತರಿದ್ದರು.

# ಹೊನ್ನಳ್ಳಿಯಲ್ಲಿ ಮತದಾನ ಜಾಗೃತಿ ಕಾರ್ಯಕ್ರಮ




ಉದಯರಶ್ಮಿ ನ್ಯೂಸ್

ಬ್ರಹ್ಮದೇವನಮಡು: ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಮತದಾರರಲ್ಲಿ ಮತದಾನದ ಜಾಗೃತಿ ಮೂಡಿಸಲು ತಾಲೂಕು ಆಡಳಿತ, ತಾಲೂಕು ಸ್ವೀಪ್ ಸಮಿತಿ ಹಾಗೂ ಹೊನ್ನಳ್ಳಿ ಗ್ರಾಪಂ ಆಶ್ರಯದಲ್ಲಿ ಮತದಾನ ಜಾಗೃತಿ ಕಾರ್ಯಕ್ರಮವನ್ನು ಭಾನುವಾರ ಏರ್ಪಡಿಸಲಾಗಿತ್ತು.

ಈ ವೇಳೆ ಗ್ರಾಪಂ ಪಿಡಿಒ ಎಸ್.ಸಿ.ನಾಯ್ಕೋಡಿ ಮಾತನಾಡಿ, ಪ್ರಜಾಪ್ರಭುತ್ವದ ಯಶಸ್ಸು ನಮ್ಮ ದೇಶದ ಸಾರ್ವತ್ರಿಕ ಚುನಾವಣೆಗಳನ್ನು ಅವಲಂಬಿಸಿದೆ. ದೇಶದ ಪ್ರತಿ ಪ್ರಜೆಯೂ ಆಮಿಷಗಳಿಗೆ ಬಲಿಯಾಗದೆ ತನಗೆ ಸಂವಿಧಾನ ಬದ್ದ ಪ್ರಾಪ್ತವಾಗಿರುವ ಮತಧಿಕಾರವನ್ನು ಯೋಗ್ಯ ಅಭ್ಯರ್ಥಿಗಳ ಆಯ್ಕೆಗೆ ಚಲಾಯಿಸಬೇಕು. ಹೀಗಾಗಿ ಮೆ.7ರಂದು ನಡೆಯುವ ಲೋಕಸಭಾ ಚುನಾವಣೆಯಲ್ಲಿ ಸ್ವಯಂ ಸ್ಪೂರ್ತಿಯಿಂದ ಮತಗಟ್ಟೆಗೆ ತೆರಳಿ ಮತ ಚಲಾಯಿಸಬೇಕು ಎಂದು ಮನವಿ ಮಾಡಿದರು.

ಮುಖ್ಯ ಶಿಕ್ಷಕ ಎನ್. ಆರ್.ಬಡಿಗೇರ, ಶಿಕ್ಷಕ ಎಸ್.ಐ.ಯಳಸಂಗಿ, ಶ್ರೀಮತಿ ಜಿನತ್ ಕೌಸರ್, ಚಾಂದಬಾಷಾ ದರ್ಗಾ, ಬಸವರಾಜ ಸಜ್ಜನ, ಖಾಸಿಂಮಸಾಬ್ ರಾಜೇಕೋಳ, ಜೆಟ್ಟೆಪ್ಪ ದೊಡ್ಡಮನಿ ಸೇರಿದಂತೆ ಗ್ರಾಪಂ ಸಿಬ್ಬಂದಿ, ಆಶಾ ಕಾರ್ಯಕರ್ತರು,ಅಂಗನವಾಡಿ ಕಾರ್ಯಕರ್ತರು ಇದ್ದರು.

### ಓದುಗರ ಚಾವಡಿ ರಾಜೇಂದ್ರಕುಮಾರ ಬಿರಾದಾರ ಸಾಂಸ್ಕೃತಿಕ ವೇದಿಕೆಯ ಮಾಸಿಕ ಪುಸ್ತಕ ಪರಿಚಯ ಕಾರ್ಯಕ್ರಮ

# ನೈಜ ಬದುಕಿನ ಅನಾವರಣವೇ ಕಥೆಗಳ ಜೀವಾಳ :ದಾಕ್ಷಾಯಿಣಿ

ಉದಯರಶ್ಮಿ ನ್ಯೂಸ್

ವಿಜಯಪುರ: ನಮ್ಮ ಸುತ್ತಮುತ್ತ ನಡೆಯುವ ನೈಜ ಘಟನೆಗಳು, ಮನೆಗಳಲ್ಲಿ ನಡೆಯುವ ಸಣ್ಣ ಪುಟ್ಟ ಸಂಭ್ರಮಗಳು, ಗಂಟಲುಬ್ಬಿ ಬಂದ ನೋವಿನ ಬಿಕ್ಕಳಿಕೆಗಳು, ನಮ್ಮವೇ ಆದ ಸಮಸ್ಯೆಗಳು, ಆಶಯಗಳು, ಹತಾಶೆಗಳು ಕಥಾವಸ್ತುಗಳಾಗಿ ಗಮನ ಸೆಳೆಯುತ್ತವೆ ಎಂದು ಸಾಹಿತಿ ದಾಕ್ಷಾಯಿಣಿ ಬಿರಾದಾರ ಹೇಳಿದರು.

ಬ್ಯಾಂಕರ್ಸ್ ಕಾಲೋನಿಯ ಶ್ರೀ ವರಸಿದ್ಧಿ ವಿನಾಯಕ ದೇವಸ್ಥಾನದಲ್ಲಿ ಡಾ. ಎಂ.ಎಸ್. ಮಾಗಣಗೇರಿ ಕುಟುಂಬದವರು ಆಯೋಜಿಸಿದ ಓದುಗರ ಚಾವಡಿ ರಾಜೇಂದ್ರಕುಮಾರ ಬಿರಾದಾರ ಸಾಂಸ್ಕೃತಿಕ ವೇದಿಕೆಯ ಮಾಸಿಕ ಪುಸ್ತಕ ಪರಿಚಯ ಕಾರ್ಯಕ್ರಮದಲ್ಲಿ ತಾಳಿಕೋಟಿಯ ಸವಿತಾ ಆರ್. ಇನಾಮದಾರ ಅವರ 'ಅರ್ಧ ನೆನಪು ಅರ್ಧ ಕನಸು' ಕಥಾ ಸಂಕಲನವನ್ನು ಪರಿಚಯಿಸಿ ಅವರು ಮಾತನಾಡಿದರು.



ಇಲ್ಲಿನ ಕಥೆಗಳ ಭಾಷೆ ವಿಶೇಷವಾಗಿದೆ. ಉತ್ತರ ಕರ್ನಾಟಕದ ಭಾಷೆಯ ಲಯವನ್ನು ಸಮರ್ಥ–ರ್ಥವಾಗಿ ಬಳಸುವುದರೊಟ್ಟಿಗೆ ಪ್ರಾದೇಶಿಕ ಅಸ್ಮಿತೆಯನ್ನು ಪ್ರತಿಷ್ಠಾಪಿಸಿ ಸೂಕ್ಷ್ಮ ಭಾವನೆಗಳಿಗೆ ಈ ಭಾಗದ ಭಾಷೆ ಹಾಗೂ ಅದರ ನುಡಿಗಟ್ಟುಗಳು ಸಮರ್ಥವಾಗಿವೆ ಎಂಬುದನ್ನು ಸಾಕ್ಷೀಕರಿಸಿದ್ದಾರೆ. ಮುಕ್ತವಾಗಿ ಒಲಿದಂತೆ ಉಲಿಯುವ ತನ್ನತನವಿರುವ ಈ ಭಾಷೆಯನ್ನು ಲೇಖಕರು ಕತೆಗಳಲ್ಲಿ ಅಚ್ಚುಕಟ್ಟಾಗಿ ದುಡಿಸಿಕೊಂಡಿದ್ದಾರೆ. ಇವರ ಬಹುತೇಕ ಕಥೆಗಳ ಪಾತ್ರಗಳಿಗೆ ಸಶಕ್ತ ಅಭಿವ್ಯಕ್ತಿ ಒದಗಿಬಂದಿದೆ. ಇಲ್ಲಿರುವ ಕತೆಗಳು ಯಾವುದೋ ಕಲ್ಪನೆಯ ದಂತಗೋಪುರಗಳಲ್ಲಿ ಕುಳಿತು ಕಾಲಕ್ಷೇಪಕ್ಕಾಗಿ ಹೇಳಿಕೊಂಡ ರಮ್ಯವಾದ ಸಂಗತಿಗಳಲ್ಲ. ಗ್ರಾಮ್ಯ ಪರಿಸರದಲ್ಲಿಯೇ ಒಡಮೂಡಿ ಆಕೃತಿ ತಾಳುವ ಈ ಕಥೆಗಳು ಹಳ್ಳಿಯ ಬದುಕಿನ ಬವಣೆ, ಛಲ, ಸೇಡು, ಅಸಹಾಯಕತೆ, ಧೈರ್ಯ ಎಲ್ಲವನ್ನೂ ತೆರೆದಿಡುತ್ತವೆ ಎಂದರು.

ಕಾರ್ಯಕ್ರಮವನ್ನು ಸರಕಾರಿ ಪದವಿ ಪೂರ್ವ ಕಾಲೇಜು ಅರ್ಜುಣಗಿಯ ಕನ್ನಡ ಉಪನ್ಯಾಸಕಿ ಡಾ.ಸವಿತಾ ಝಳಕಿ ಉದ್ಘಾಟಿಸಿದರು. ಮುಖ್ಯ ಅತಿಥಿಗಳಾಗಿ ಹೊಟೇಲ್ ಉದ್ಯಮಿ ನಾಗೇಶ್ ಶೆಟ್ಟಿ ಹಾಗೂ ಓಂ ಸಾಯಿ ಯೋಗ ಅಕಾಡೆಮಿಯ ಅಧ್ಯಕ್ಷೆ ಕೀರ್ತಿ ಮಠಪತಿ ಮಾತನಾಡಿ, ವ್ಯಾಯಾಮ, ಯೋಗ, ಧ್ಯಾನಗಳು ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕೆ ದಿವ್ಯ ಔಷಧವಾದರೆ ಸಾಹಿತ್ಯ ಮತ್ತು ಓದು ಜ್ಞಾನದ ಹಸಿವನ್ನು ಹಿಂಗಿಸಿ ಸುಂದರ ವ್ಯಕ್ತಿತ್ವ ರೂಪಿಸುವಲ್ಲಿ ಸಹಕಾರಿಯಾಗುತ್ತದೆ ಎಂದರು.

ಅಧ್ಯಕ್ಷತೆಯನ್ನು ವಹಿಸಿದ್ದ ಹಿರಿಯ ಸಾಹಿತಿ ಸುಭಾಷ್ ಯಾದವಾಡ ಮಾತನಾಡಿ, ಕಥೆ ಕಟ್ಟುವುದೂ ಒಂದು ಕಲೆ. ಬದುಕಿನ ಅನುಭವಗಳ ಸುರಳಿಯನ್ನು ಬಿಚ್ಚಿ ಕಾಲ ಗರ್ಭದ ಸತ್ಯಾಸತ್ಯತೆಗಳ ಅನಾವರಣ ಮಾಡುವುದು ಕಥೆಗಳ ಮುಖ್ಯ ಧ್ಯೇಹ ಎಂದರು.

ವೇದಿಕೆ ಮೇಲೆ ಚಾವಡಿ ಬಳಗದ ಅಧ್ಯಕ್ಷ ಬಿ.ಆರ್.ಬನ್ನೋಡೆ ಉಪಸ್ಥಿತ–ರಿದ್ದರು.

ಇದೇ ಸಂದರ್ಭದಲ್ಲಿ ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ತು ನಡೆಸುವ ಕಾವ್ಯ, ಜಾಣ, ರತ್ನ ಪರೀಕ್ಷೆಗಳ ಪಠ್ಯಪುಸ್ತಕಗಳ ರಚನಾ ಸಮಿತಿಗೆ ಉತ್ತರ ಕರ್ನಾಟಕ ಭಾಗದ ಸದಸ್ಯರಾಗಿ ಆಯ್ಕೆಗೊಂಡ ಡಾ. ಎಸ್.ಟಿ ಮೇರವಾಡೆಯವರನ್ನು ಸನ್ಮಾನಿಸಲಾಯಿತು.


ಕಾರ್ಯಕ್ರಮದಲ್ಲಿ ಓದುಗರ ಚಾವಡಿಯ ಸಂಚಾಲಕರಾದ ಶರಣು ಸಬರದ, ಡಾ.ವಿ.ಡಿ ಐಹೊಳ್ಳಿ ಡಾ.ಉಷಾ ದೇವಿ ಹಿರೇಮಠ, ಪ್ರಭಾವತಿ ದೇಸಾಯಿ, ಪ್ರೊ. ಎಂ.ಎಸ್ ಝಳಕಿ, ರಮೇಶ ಚವಾಣ್, ಸಂಗಮೇಶ ಮೇತ್ರಿ, ಡಾ. ರಾಜಕುಮಾರ ಜೊಲ್ಲೆ, ಮನು ಪತ್ತಾರ ಕಲಕೇರಿ, ಶಿವಶರಣಪ್ಪ ಶಿರೂರು, ಜಿ. ಸಿ. ಹಿರೇಮಠ್, ರಮೇಶ್ ತೇಲಿ, ಶ್ರೀಧರ ಪತ್ತಾರ, ರವೀಂದ್ರ ಝಳಕಿ, ಅಮರೇಶ ಸಾಲಕ್ಕಿ, ಸುಭಾಷಚಂದ್ರ ಕನ್ನೂರ, ಶರಣಗೌಡ ಪಾಟೀಲ, ಮಯೂರ ತಿಳಗೂಳಕರ್, ಡಾ.ಶಶಿಧರ ಶಿರಹಟ್ಟಿ, ಸೋಮಶೇಖರ ಕುರ್ಲೆ, ಮುಂತಾದವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಕು.ಶ್ರೀನಿಧಿ ಮಾಗಣಗೇರಿ ಪ್ರಾರ್ಥಿಸಿದರೆ ಬಳಗದ ಸದಸ್ಯ ಬಸವರಾಜ ಕುಂಬಾರ ನಿರೂಪಿಸಿ, ವಂದಿಸಿದರು.

# ಪಿಯುಸಿಪರೀಕ್ಷೆ–2: ವೆಬ್ ಕಾಸ್ಟಿಂಗ್ ವ್ಯವಸ್ಥೆ ಪರಿಶೀಲಿಸಿದ ಜಿಪಂ ಸಿಇಓ

ಉದಯರಶ್ಮಿ ನ್ಯೂಸ್

ವಿಜಯಪುರ: ನಗರದ ಬಾಲಕರ ಪದವಿ ಪೂರ್ವ ಕಾಲೇಜಿಗೆ ಭೇಟಿ ನೀಡಿ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ–2 ಕೇಂದ್ರಗಳಿಗೆ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ ಸೋಮವಾರ ಭೇಟಿ ನೀಡಿ ವೆಬ್ ಕಾಸ್ಟಿಂಗ್ ವ್ಯವಸ್ಥೆಯನ್ನು ಪರಿಶೀಲಿಸಿದರು.



ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ–2 ಗೆ ಹಾಜರಾದ ಎಲ್ಲ ವಿದ್ಯಾರ್ಥಿಗಳ ಹಾಜರಾತಿ, ಪರೀಕ್ಷಾ ಕೇಂದ್ರಗಳ ಕೊಠಡಿಗಳ ಸಂಖ್ಯೆ, ವಿದ್ಯಾರ್ಥಿಗಳಿಗೆ ಆಸನದ ವ್ಯವಸ್ಥೆ, ವಿಶೇಷ ಅಗತ್ಯವುಳ್ಳ ವಿದ್ಯಾರ್ಥಿಗಳಿಗೆ ಪ್ರತ್ಯೇಕ ಆಸನದ ವ್ಯವಸ್ಥೆ, ಪರೀಕ್ಷಾ ಕೊಠಡಿ ಮೇಲ್ವಿಚಾರಕರ ನೇಮಕ ಮಾಡಿರುವುದು, ಪರೀಕ್ಷಾ ಕೇಂದ್ರದಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಿರುವ ಕುರಿತು, ಪರೀಕ್ಷಾ ಕೇಂದ್ರದಲ್ಲಿ ಎಲ್ಲಾ ಕೊಠಡಿಗಳಿಗೆ ಸಿಸಿ ಟಿವಿ ಮತ್ತು ವೆಬ್ ಕಾಸ್ಟಿಂಗ್ ಅಳವಡಿಸಿರುವ ಕುರಿತು ಪರಿಶೀಲಿಸಿದರು. ಬಳಿಕ ಜಿಲ್ಲಾ ಪಂಚಾಯತಿಯ ಆವರಣದಲ್ಲಿರುವ ಜಿಲ್ಲಾ ಸಂಪನ್ಮೂಲ ಕೇಂದ್ರದಲ್ಲಿ ಅಳವಡಿಸಿರುವ ವೆಬ್ ಕಾಸ್ಟಿಂಗ್ ವ್ಯವಸ್ಥೆಯನ್ನು ವೀಕ್ಷಿಸಿದರು.

ಪರೀಕ್ಷಾ ಕೇಂದ್ರಗಳಲ್ಲಿ ಪ್ರಶ್ನೆ ಪತ್ರಿಕೆ ಅಭಿರಕ್ಷಕರು ಹಾಗೂ ಸ್ಥಾನಿಕ ಜಾಗೃತ ದಳದವರು ನಿಯಮಾನುಸಾರ ಕರ್ತವ್ಯ ನಿರ್ವಹಿಸುತ್ತಿರುವ ಕುರಿತು ಪರೀಕ್ಷಾ ಕೇಂದ್ರಗಳಲ್ಲಿ ಅನ್ಯ ಹಾಗೂ ಬಾಹ್ಯ ವ್ಯಕ್ತಿಗಳು ಯಾರೂ ಇಲ್ಲದೇ ಇರುವುದನ್ನೂ ಸಹ ಪರಿಶೀಲಿಸಿದರು.

ಇದೇ ವೇಳೆ ಪರೀಕ್ಷಾ ಕೇಂದ್ರಗಳಲ್ಲಿ ಯಾವುದೇ ಸಮಸ್ಯೆಗಳು ಉಂಟಾಗದಂತೆ ಪರೀಕ್ಷೆಗಳನ್ನು ಕಟ್ಟು–ನಿಟ್ಟಾಗಿ ಶಿಸ್ತಿನಿಂದ ಮತ್ತು ಪರಿಕ್ಷೆಯನ್ನು ಅಚ್ಚುಕಟ್ಟಾಗಿ ನಡೆಸುವುದು, ಭದ್ರತೆ ಒದಗಿಸುವುದು, ವಿದ್ಯಾರ್ಥಿಗಳು ಭಯಮುಕ್ತ ಪ್ರಶಾಂತ ವಾತಾವರಣದಲ್ಲಿ ಆತ್ಮ ವಿಶ್ವಾಸದಿಂದ ಪರೀಕ್ಷೆ ಬರೆಯುವ ವಿದ್ಯಾರ್ಥಿ ಸ್ನೇಹಿ ಪರೀಕ್ಷಾ ವ್ಯವಸ್ಥೆಯನ್ನು ನಿರ್ಮಿಸಲು ಅಗತ್ಯ ಕ್ರಮ ವಹಿಸಬೇಕು ಎಂದು ಸ್ಥಳದಲ್ಲಿದ್ದ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸಿ. ಕೆ ಹೊಸಮನಿ, ಬಾಲಕರ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಬಿ. ಬಿ. ಗಂಗನಹಳ್ಳಿ ಹಾಗೂ ಸ್ಥಾನಿಕ ಜಾಗೃತ ದಳದವರಾದ ತಿಕೋಟೆ ಮತ್ತು ಮದರಿ, ಪ್ರಶ್ನೆ ಪತ್ರಿಕೆ ಪಾಲಕರಾದ ಟಕ್ಕಳಕಿ, ಉಮರ್ಜಿ, ನಾರಾಯಣಪುರ, ಕುಂಬಾರ ಸೇ–ರಿದಂತೆ ಮತ್ತಿತರರು ಉಪಸ್ಥಿತ–ರಿದ್ದರು.

# ಅನಧಿಕೃತ ಮನೆ ನಿರ್ಮಾಣ ತಡೆಗೆ ರೈತ ಸಂಘ ಮನವಿ



ಉದಯರಶ್ಮಿ ನ್ಯೂಸ್

ದೇವರಹಿಪ್ಪರಗಿ: ಗ್ರಾಮದಲ್ಲಿ ಜಮೀನುಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಯಲ್ಲಿ ಅನಧಿಕೃತವಾಗಿ ನಿರ್ಮಾಣ ಮಾಡುತ್ತಿರುವ ಮನೆಯ ನಿರ್ಮಾಣ ತಡೆದು ರೈತರಿಗೆ ಅನುಕೂಲ ಮಾಡಿಕೊಡುವಂತೆ ರಾಜ್ಯ ರೈತಸಂಘ ಹಾಗೂ ಹಸಿರುಸೇನೆಯ ಪದಾಧಿಕಾರಿಗಳು ತಹಶೀಲ್ದಾರ ಪ್ರಕಾಶ ಸಿಂದಗಿ ಅವ–ರಿಗೆ ಮನವಿ ಸಲ್ಲಿಸಿದರು.

ತಾಲ್ಲೂಕಿನ ದೇವೂರ ಗ್ರಾಮದ ರೈತಸಂಘದ ಪದಾಧಿಕಾರಿಗಳು ಸೋಮವಾರ ತಹಶೀಲ್ದಾರ ಕಚೇ–ರಿಗೆ ಆಗಮಿಸಿ ರಸ್ತೆಯಲ್ಲಿ ಮನೆ ನಿರ್ಮಾಣ ಮಾಡುತ್ತಿರುವ ಕುರಿತು ಗಮನ ಸೆಳೆದರು. ಈ ಸಂದರ್ಭದಲ್ಲಿ ರೈತ ಸಂಘದ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ರೇಣುಕಾ ಪಾಟೀಲ ಮಾತನಾಡಿ, ದೇವೂರ ಗ್ರಾಮದಲ್ಲಿ ಜಟ್ಟಿಂಗರಾಯ ಮತ್ತು ಯಲ್ಲಮ್ಮನ ದೇವಸ್ಥಾನಗಳ ಮೂಲಕ ಸರ್ಕಾರಿ ನಕಾಶೆಯಲ್ಲಿರುವಂತೆ ರಿ.ಸ.ನಂ 1 ರಿಂದ 26 ರವರೆಗಿನ ಜಮೀನುಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಯಲ್ಲಿ ನಬೂಮಾ ಗುಲಾಬ್ ನಧಾಫ್ ಎಂಬುವವರು ಸಾರ್ವಜನಿಕ ಕೈಪಂಪು ಮುಚ್ಚಿ ಅದರ ಮೇಲೆ ಅನಧಿಕೃತ ಮನೆ ನಿರ್ಮಾಣ ಮಾಡುತ್ತಿದ್ದಾರೆ. ಈ ಬಗ್ಗೆ ಎರಡು ವರ್ಷಗಳ ಹಿಂದೆಯೇ ತಹಶೀಲ್ದಾರರಿಗೆ ಮನವಿ ಮಾಡಿ ಮನೆ ನಿರ್ಮಾಣ ತಡೆಯಲಾಗಿತ್ತು. ಈಗ ಪುನಃ ಮನೆ ನಿರ್ಮಾಣ ಆರಂಭಿಸಿದ್ದಾರೆ. ಈ ಬಗ್ಗೆ ಗ್ರಾಮದ ರೈತರು ಪ್ರಶ್ನೇ ಮಾಡಲಾಗಿ ಜಗಳಕ್ಕೆ ಬರುತ್ತಿದ್ದಾರೆ. ಆದ್ದರಿಂದ ತಹಶೀಲ್ದಾರ ಗ್ರಾಮಕ್ಕೆ ಖುದ್ದಾಗಿ ಭೇಟಿ ನೀಡಿ ಈ ಬಗ್ಗೆ ಕ್ರಮ ಕೈಗೊಂಡು ಗ್ರಾಮಸ್ಥರ ರಸ್ತೆ ಸಮಸ್ಯೆ ಬಗೆಹರಿಸಬೇಕೆಂದು ಆಗ್ರಹಿಸಿದರು. ನಂತರ ತಹಶೀಲ್ದಾರಿಗೆ ಮನವಿ ಸಲ್ಲಿಸಿದರು.

ಮನವಿ ಸ್ವೀಕರಿಸಿ ಮಾತನಾಡಿದ ತಹಶೀಲ್ದಾರರು ಈ ವಿಷಯದ ಕುರಿತು ಅಗತ್ಯ ಕ್ರಮ ವಹಿಸುವಂತೆ ಸ್ಥಳದಲ್ಲಿದ್ದ ಗ್ರಾಮ ಪಂಚಾಯಿತಿ ಸಿಬ್ಬಂದಿಗೆ ಆದೇಶಿಸಿದರು.

ಹಣಮಂತ್ರಾಯ ಪಾಟೀಲ, ಸೋಮು ಸಜ್ಜನ, ಸುರೇಶ ಪವಾರ, ಅಮೀನಗೌಡ ಬಿರಾದಾರ, ದೇವಿಂದ್ರ ಮಾದರ, ಹುಸೇನಸಾ ಮುಲ್ಲಾ, ಶ್ರೀಮಂತ ರಾಠೋಡ, ತುಕಾರಾಮ ರಾಠೋಡ, ಸಾಹೇಬಗೌಡ ಬಿರಾದಾರ ಇದ್ದರು.

# ಮನೆಯಿಂದಲೇ ಮತದಾನದಲ್ಲಿ ಶೇ.93.18 ಮತದಾನ



ಉದಯರಶ್ಮಿ ನ್ಯೂಸ್

ಬಸವನಬಾಗೇವಾಡಿ: ಮತಕ್ಷೇತ್ರದಲ್ಲಿ ಮೂರು ದಿನಗಳ ಕಾಲ ನಡೆದ ಮನೆಯಿಂದಲೇ ಮತದಾನ ಪ್ರಕ್ರಿಯೆಯಲ್ಲಿ ಶೇ. 93.18ರಷ್ಟು ಮತದಾನವಾಗಿದೆ. 85 ಕ್ಕೂ ಹೆಚ್ಚು ವಯಸ್ಸಾದ 332 ಮತದಾರರಲ್ಲಿ 307 ಮತದಾರರು ತಮ್ಮ ಮತದಾನ ಚಲಾಯಿಸಿದರೆ, 123 ವಿಕಲಚೇತನ ಮತದಾರರಲ್ಲಿ 117 ವಿಕಲಚೇತನ ಮತದಾರರು ತಮ್ಮ ಮತದಾನ ಮಾಡಿದ್ದಾರೆ. 85ಕ್ಕೂ ಹೆಚ್ಚು ವಯಸ್ಸಾದ 332 ಮತದಾರರು, 123 ವಿಕಲಚೇತನ ಮತದಾರರು ಸೇರಿ ಒಟ್ಟು 455 ಮತದಾರರು ಮತಕ್ಷೇತ್ರದಲ್ಲಿ ತಮ್ಮ ಹೆಸರು ನೋಂದಣಿ ಮಾಡಿದ್ದರು. ಇದರಲ್ಲಿ 424 ಮತದಾರರು ತಮ್ಮ ಮತದಾನ ಮಾಡುವ ಮೂಲಕ ಶೇ.93.18 ರಷ್ಟು ಮತದಾನವಾಗಿದೆ. ಇದರಲ್ಲಿ 6 ವ್ಯಕ್ತಿಗಳು ಮೃತರಾಗಿದ್ದಾರೆ.25 ಜನ ಮತದಾರರು ಗೈರು ಉಳಿದುಕೊಂಡಿದ್ದಾರೆ. ಗೈರು ಇದ್ದ ಮತದಾರರ ಮನೆಗೆ ನಮ್ಮ ಅಧಕಾರಿಗಳ ತಂಡ ಎರಡು ಸಲ ಭೇಟಿ ನೀಡಿದರೂ ಅವರು ಲಭ್ಯವಾಗಿಲ್ಲ ಎಂದು ಸಹಾಯಕ ಚುನಾವಣಾಧಿಕಾರಿ ಗಂಗಪ್ಪ ಎಂ. ತಿಳಿಸಿದ್ದಾರೆ.

# ಗೆಳೆಯರ ಬಳಗದಿಂದ ಎಸಿ ಗದ್ಯಾಳಗೆ ಸನ್ಮಾನ

ಉದಯರಶ್ಮಿ ನ್ಯೂಸ್

ಇಂಡಿ: ಇತ್ತೀಚೆಗೆ ತಾಲೂಕಿನ ಲಚ್ಯಾಣ ಗ್ರಾಮದಲ್ಲಿ ತೆರೆದ ಕೊಳವೆ ಬಾವಿಯಲ್ಲಿ ಸಿಕ್ಕಿಕೊಂಡಿದ್ದ ಬಾಲಕ ಸಾತ್ವಿಕನನ್ನು ಉಳಿಸಿಕೊಳ್ಳುವಲ್ಲಿ ಮುಂಚೂಣಿ ಪಾತ್ರ ವಹಿಸಿದ್ದ ಇಂಡಿ ತಾಲೂಕ ಉಪವಿಭಾಗಾಧಿಕಾರಿ ಅಬೀದ ಗದ್ಯಾಳ ಅವರನ್ನು ಲಚ್ಯಾಣ ಡಿಎಡ್ ಗೆಳೆಯರ ಬಳಗದ ವತಿಯಿಂದ ಸನ್ಮಾನಿಸಲಾಯಿತು.



ಸಾಮಾಜಿಕ ಕಳಕಳಿಯ ಈ ಕಾರ್ಯಕ್ಕೆ ವ್ಯಾಪಕ ಮೆಚ್ಚುಗೆ ವ್ಯಕ್ತಪಡಿಸಿದ ಗೆಳೆಯರ ಬಳಗದ ಬಸವರಾಜ ಬಬಲಾದ, ಗೋಪಾಲ ಜಾಧವ, ಬಾಳು ಪೂಜಾರಿ, ಸುಲೆಮಾನ್ ಕಸಾಯಿ, ಮಲ್ಲಿಕಾರ್ಜುನ ಜ್ಯಾಮಗೊಂಡ, ವೀರಭದ್ರಯ್ಯ ಮಠ, ಪ್ರಕಾಶ ಗೋಡೆಕರ, ಸಂತೋಷ ಪಾಟೀಲ, ಸಂಗಮೇಶ ಮುಜಗೊಂಡ, ಅಬ್ದುಲ್ ಗಣಿ ಮುಜಾವರ, ಅಪ್ಪು ವಾಲಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR